ಸಂಪುಟ 01 । ಸಂಚಿಕೆ 122 । ಶುಕ್ರವಾರ 20 ಮಾರ್ಚ್ 2026 । ಪುಟ 4 । ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

1) ವಿಶ್ವ ಬಾಯಿ ಆರೋಗ್ಯ ದಿನ (World Oral Health Day
ಮಾರ್ಚ್ 20, 2026 ರಂದು ವಿಶ್ವದಾದ್ಯಂತ ಆಚ-ರಿಸಲಾಗುತ್ತದೆ. ಇದು ಬಾಯಿ ಮತ್ತು ಹಲ್ಲಿನ ಆರೋಗ್ಯದ ಮಹತ್ವವನ್ನು ಜನರಲ್ಲಿ ಅರಿವು ಮೂಡಿಸಲು ಆಚರಿಸುವ ದಿನವಾಗಿದೆ.

2) ವಿಶ್ವ ಗುಬ್ಬಚ್ಚಿ ದಿನ (World Sparrow Day)
ಗುಬ್ಬಚ್ಚಿಗಳ ಸಂರಕ್ಷಣೆ ಮತ್ತು ಜಾಗೃತಿಗಾಗಿ ಈ ದಿನವನ್ನು ಮೀಸಲಿಡಲಾಗಿದೆ. ಇದರ ಆಚರಣೆಯು ಭಾರತದ 'ನೇಚರ್ ಫಾರೆವರ್ ಸೊಸೈಟಿ'ಯಿಂದಲೇ ಪ್ರಾರಂಭವಾಯಿತು ಎಂಬುದು ವಿಶೇಷ

3) ಅಂತರಾಷ್ಟ್ರೀಯ ಸಂತೋಷದ ದಿನ (International Day of Happiness)
ಜನರ ಜೀವನದಲ್ಲಿ ಸಂತೋಷದ ಮಹತ್ವವನ್ನು ಸಾರಲು ವಿಶ್ವಸಂಸ್ಥೆಯು ಈ ದಿನವನ್ನು ಆಚರಿಸುತ್ತದೆ

## ಸುಭಾಷಿತ

ಅಕ್ಷರ ಕಲಿತ ವ್ಯಕ್ತಿ ಭ್ರಷ್ಟನಾಗಬಹುದು,
ಆದರೆ ಸಂಸ್ಕಾರ ಕಲಿತ ವ್ಯಕ್ತಿ ಎಂದೆಂದಿಗೂ
ಭ್ರಷ್ಟನಾಗಲಾರ.

-ಶ್ರೀ ಸಿದ್ಧೇಶ್ವರ ಸ್ವಾಮೀಜಿ

## ಸಾರಿಗೆ ನಿಗಮದಿಂದ ಶಾಸಕ ನಾಡಗೌಡರಿಗೆ ಸನ್ಮಾನ

ನೈಜ್ಯ ದೆಸೆ ನ್ಯೂಸ್



ತಾಳಿಕೋಟಿ: ಪಟ್ಟಣದ ಸಾರಿಗೆ ನಿಗಮದ ಸಿಬ್ಬಂದಿ ವಸತಿ ಗೃಹಗಳ ಉದ್ಘಾಟನಾ ಸಮಾರಂಭದಲ್ಲಿ ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಗಮದ ಅಧ್ಯಕ್ಷ,ಶಾಸಕರಾದ ಸಿ.ಎಸ್. ನಾಡಗೌಡ(ಅಪ್ಪಾಜಿ) ಅವರನ್ನು ನಿಗಮದ ವತಿಯಿಂದ ವಿಜಯಪುರ ವಿಭಾಗೀಯ ನಿಯಂತ್ರಣಾಧಿಕಾರಿ ನಾರಾಯಣಪ್ಪ ಕುರುಬರ ಸನ್ಮಾನಿಸಿ ಗೌರವಿಸಿದರು. ವೇ.ಮೂ.ಮುರಗೇಶ ವಿರಕ್ತಮಠ,ವೀರಪಾಕ್ಷಯ್ಯ ಸಿ.ಹಿರೇಮಠ,ತಹಸಿಲ್ದಾರ್ ಡಾ.ವಿನಯಾ ಹೂಗಾರ, ಗ್ಯಾರಂಟಿ ಅನುಷ್ಠಾನ ಸಮಿತಿ ತಾಲೂಕ ಅಧ್ಯಕ್ಷ ಸಂಗನಗೌಡ ದೇಸಾಯಿ, ಸುರೇಶಧಣಿ ನಾಡಗೌಡ ಬಿಂಜಲಭಾವಿ, ಸಿದ್ದನಗೌಡ ಪಾಟೀಲ (ನಾವದಗಿ), ಪ್ರಭುಗೌಡ ಮದರಕಲ್ಲ, ಶರಣುಧಣಿ ದೇಶಮುಖ, ಸಂಗನಗೌಡ ಅಸ್ಕಿ,ಘಟಕ ವ್ಯವಸ್ಥಾಪಕ ಪಿ.ಕೆ.ಜಾಧವ, ಪಿಎಸ್ಐ ಜ್ಯೋತಿ ಖೋತ್,ನಿಗಮದ ಬೋರಯ್ಯ ಮಹಿಸಾಲ, ಗುತ್ತಿಗೆದಾರ ಅಮ್ಮಾನ್ ಮುನ್ಸಿ ಹಾಗೂ ನಿಗಮದ ಸಿಬ್ಬಂದಿಗಳು ಇದ್ದರು.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು
ತಪ್ಪದೆ ಓದಿರಿ.

# ಸರ್ಕಾರಿ ನೌಕರರ ವರ್ಗಾವಣೆಗೆ 'ಸಿಎಂ ಹಸ್ತಕ್ಷೇಪ' ಸಲ್ಲದು, ಮಾಡಲು ಇದಕ್ಕಿಂತ ದೊಡ್ಡ ಕೆಲಸಗಳಿವೆ-ಹೈಕೋರ್ಟ್




ಬೆಂಗಳೂರು ಮಾ.19): ರಾಜ್ಯ ಸರ್ಕಾರಿ ನೌಕರರ ವರ್ಗಾವಣೆ ವಿಚಾರದಲ್ಲಿ ಮುಖ್ಯಮಂತ್ರಿಗಳ ಕಚೇರಿ (ಅಒಔ) ನೇರವಾಗಿ ಹಸ್ತಕ್ಷೇಪ ಮಾಡುವುದಕ್ಕೆ ಕರ್ನಾಟಕ ಹೈಕೋರ್ಟ್ ತೀವ್ರ ಆಕ್ಷೇಪ ವ್ಯಕ್ತಪಡಿಸಿದೆ. 'ಮುಖ್ಯಮಂತ್ರಿಗಳಿಗೆ ವರ್ಗಾವಣೆಗಿಂತಲೂ ಮಾಡಬೇಕಾದ ಉತ್ತಮ ಕೆಲಸಗಳು ಬಹಳಷ್ಟಿವೆ. ಇಂತಹ ಸಣ್ಣ ವಿಚಾರಗಳಿಗೆ ಅವರು ತಮ್ಮ ಸಮಯವನ್ನು ವಿನಿಯೋಗಿಸಬಾರದು' ಎಂದು ನ್ಯಾಯಪೀಠ ಮಾರ್ಮಿಕವಾಗಿ ಹೇಳಿದೆ.ಬೆಸ್ಕಾಂನ (ಃಇಖಅಔಒ) ವೈಟ್‌ಫೀಲ್ಡ್ ವಿಭಾಗದ ಸಹಾಯಕ ಇಂಜಿನಿಯರ್ (ಂಇ) ತಮ್ಮ ವರ್ಗಾವಣೆಗೆ ಸಂಬಂಧಿಸಿದಂತೆ ಸಲ್ಲಿಸಿದ್ದ ಮೇಲ್ಮನವಿಯ (ಘಂ ಓಂ. 2 ಅಜಿ 2025) ವಿಚಾರಣೆ ನಡೆಸಿದ ನ್ಯಾಯಮೂರ್ತಿಗಳಾದ ಡಿ.ಕೆ. ಸಿಂಗ್ ಹಾಗೂ ಟಿ.ಎಂ. ನದಾಫ್ ಅವರಿದ್ದ ವಿಭಾಗೀಯ ಪೀಠವು ಈ ಮಹತ್ವದ ಆದೇಶ ನೀಡಿದೆ. ಪ್ರಕರಣದ ವಿಚಾರಣೆ ವೇಳೆ ಹೈಕೋರ್ಟ್ ಏಕಸದಸ್ಯ ಪೀಠವು ಈ ಹಿಂದೆ ನೀಡಿದ್ದ ಅಭಿಪ್ರಾಯಗಳನ್ನು ಎತ್ತಿಹಿಡಿದ ನ್ಯಾಯಪೀಠ, ಮುಖ್ಯಮಂತ್ರಿಗಳ ಕಚೇರಿಯಿಂದ ಬಿ ಹಾಗೂ ಸಿ ವರ್ಗದ ನೌಕರರ ವರ್ಗಾವಣೆಗೆ ಸಂಬಂಧಿಸಿದಂತೆ ನೂರಾರು ಶಿಫಾರಸು ಪತ್ರಗಳು ಹೊರಬರುತ್ತಿರುವ ಬಗ್ಗೆ ಅಚ್ಚರಿ ವ್ಯಕ್ತಪಡಿಸಿತು. ವರ್ಗಾವಣೆ ಮತ್ತು ಪೋಸ್ಟಿಂಗ್ ವಿಚಾರಗಳನ್ನು ಆಯಾ ಆಡಳಿತ ಇಲಾಖೆಗಳಿಗೆ ಮತ್ತು ಸಕ್ಷಮ ಪ್ರಾಧಿಕಾರಗಳಿಗೆ ಬಿಡಬೇಕು. ರಾಜ್ಯದ ಅತ್ಯುನ್ನತ ಅಧಿಕಾರಿಯಾದ ಮುಖ್ಯಮಂತ್ರಿಗಳು ಇಂತಹ ವಿಚಾರಗಳಲ್ಲಿ ಹಸ್ತಕ್ಷೇಪ ಮಾಡಬಾರದು ಮತ್ತು ತಮ್ಮ ಅಮೂಲ್ಯ ಸಮಯವನ್ನು ಇದಕ್ಕೆ ವ್ಯಯಿಸಬಾರದು' ಎಂದು ನ್ಯಾಯಪೀಠ ಅಭಿಪ್ರಾಯಪಟ್ಟಿದೆ. ಅಲ್ಲದೆ, ಇನ್ನು ಮುಂದೆ ಮುಖ್ಯಮಂತ್ರಿಗಳ ಕಚೇ-ರಿಯು ವರ್ಗಾವಣೆ ಕೋರಿ ಬರುವ ಯಾವುದೇ ನೇರ ಮನವಿಗಳನ್ನು ಸ್ವೀಕರಿಸಬಾರದು ಎಂದು ಸ್ಪಷ್ಟಪಡಿಸಿದೆ.ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಹೈಕೋರ್ಟ್ ರಾಜ್ಯ ಮುಖ್ಯ ಕಾರ್ಯದರ್ಶಿಯವ-ರಿಂದ (CS) ಸ್ಪಷ್ಟನೆ ಕೇಳಿತ್ತು. ಇದಕ್ಕೆ ಅಫಿಡವಿಟ್ ಸಲ್ಲಿಸಿರುವ ಮುಖ್ಯ ಕಾರ್ಯದರ್ಶಿಯವರು, 'ಮುಖ್ಯಮಂತ್ರಿಗಳ ಕಚೇರಿಯಿಂದ ಬರುವ ಟಿಪ್ಪಣಿಗಳು ಕೇವಲ ಶಿಫಾರಸುಗಳಷ್ಟೇ ಹೊರತು ಅವು ಅಂತಿಮ ವರ್ಗಾವಣೆ ಆದೇಶಗಳಲ್ಲ. ಪ್ರತಿಯೊಂದು ವರ್ಗಾವಣೆಯನ್ನು ಆಯಾ ಇಲಾಖೆಗಳು ವರ್ಗಾವಣೆ ಮಾರ್ಗಸೂಚಿ ಮತ್ತು ಕೆಸಿಎಸ್ (ಏಅಖ) ನಿಯಮಗಳ ಅಡಿಯಲ್ಲೇ ಪರಿಶೀಲಿಸಿ ಆದೇಶ ಹೊರಡಿಸುತ್ತವೆ' ಎಂದು ಉತ್ತರಿಸಿದ್ದಾರೆ. ಸಿಎಂ ಕಚೇ-ರಿಯ ಸಿಬ್ಬಂದಿಗೂ ಈ ಬಗ್ಗೆ ಸೂಕ್ತ ಅರಿವು ಮೂಡಿಸಲಾಗುವುದು ಎಂದು ಅವರು ತಿಳಿಸಿದ್ದಾರೆ. ಪ್ರಸ್ತುತ ಪ್ರಕರಣದ ಅರ್ಜಿದಾರ ವರ್ಗಾವಣೆಗೆ ಸಂಬಂಧಿಸಿದಂತೆ ಮಾರ್ಚ್ ಅಂತ್ಯದವರೆಗೆ ಯಥ-ಾಸ್ಥಿತಿ ಕಾಯ್ದುಕೊಳ್ಳುವಂತೆ ಕೋರ್ಟ್ ಸೂಚಿಸಿದೆ. ಏಪ್ರಿಲ್‌ನಿಂದ ಹೊಸ ವರ್ಗಾವಣೆ ಪ್ರಕ್ರಿಯೆ ಆರಂಭವಾಗುವುದರಿಂದ, ಅಲ್ಲಿಯವರೆಗೆ ಅವರನ್ನು ಹಾಲಿ ಇರುವ ಸ್ಥಳದಿಂದ ಬದಲಾಯಿಸಬಾರದು ಎಂದು ಪೀಠವು ನಿರ್ದೇಶಿಸಿದೆ. ಇರದಲ್ಲಿ ಮತ್ತೊಂದು ವಿಶೇಷವೆಂದರೆ, ಹೈಕೋರ್ಟ್ ನೀಡಿದ ಈ ಆದೇಶದ ಪ್ರತಿಯನ್ನು ನೇರವಾಗಿ ಮುಖ್ಯಮಂತ್ರಿಗಳಿಗೆ ತಲುಪಿಸಲು ರಿಜಿಸ್ಟ್ರಾರ್ ಜನರಲ್ ಅವರಿಗೆ ಪೀಠವು ಸೂಚಿಸಿದೆ. ಇದ-ರಿಂದ ಮುಖ್ಯಮಂತ್ರಿಗಳು ತಮ್ಮ ಕಚೇರಿಯಲ್ಲಿ ನಡೆಯುತ್ತಿರುವ ವರ್ಗಾವಣೆ ಶಿಫಾರಸುಗಳ ಬಗ್ಗೆ ಸ್ವತಃ ಗಮನಹರಿಸಿ, ಇಂತಹ ಪ್ರವೃತ್ತಿಗೆ ಕಡಿವಾಣ ಹಾಕಲು ಸಾಧ್ಯವಾಗಲಿದೆ ಎಂಬುದು ಕೋರ್ಟ್‌ನ ಆಶಯವಾಗಿದೆ.ಈ ತೀರ್ಪು ರಾಜ್ಯ ರಾಜ-ಕಾರಣದಲ್ಲಿ ಮತ್ತು ಸರ್ಕಾರಿ ನೌಕರರ ವಲಯದಲ್ಲಿ ದೊಡ್ಡ ಮಟ್ಟದ ಸಂಚಲನ ಮೂಡಿಸಿದೆ. ಇದುವರೆಗೆ ವರ್ಗಾವಣೆಗಾಗಿ ರಾಜಕಾರಣಿಗಳ ಮತ್ತು ಸಿಎಂ ಕಚೇರಿಯ ಪ್ರಭಾವ ಬಳಸುತ್ತಿದ್ದವರಿಗೆ ಈ ಆದೇಶ ಒಂದು ಎಚ್ಚರಿಕೆಯ ಗಂಟೆಯಾಗಿದೆ. ಕ್ಷೇತ್ರದಲ್ಲಿ ದೊಡ್ಡ ಬದಲಾವಣೆ ನಿರೀಕ್ಷಿಸಬಹುದು.

# ಯುಗಾದಿ ಹಾಗೂ ರಂಜಾನ್ ಹಬ್ಬದ ಶಾಂತಿ ಸಭೆ



ನೈಜ್ಯ ದೆಸೆ ನ್ಯೂಸ್

ಲಿಂಗಸಗೂರು : ಮಾ 20.ಯುಗಾದಿ ಹಾಗೂ ರಂಜಾನ್ ಹಬ್ಬ ಆಚರಣೆ ಶಾಂತಿ ರೀತಿಯ ದೈವಭಕ್ತಿ ಹಬ್ಬವಾಗಿ ಪರಿವರ್ತನೆ ಗೊಳ್ಳಬೇಕು ಅದು ಯಾವುದೇ ದ್ವೇಷ ಮೋಜು ಮಸ್ತಿ ಹಬ್ಬವಾಗಬಾರದು. ಒಂದು ವೇಳೆ ಕಾನೂನಿನ ನಿಯಮ ಉಲ್ಲಂಘಿಸದೆ ಇಲಾಖೆ ಜೊತೆ ಕೈಜೋಡಿಸಬೇಕು, ಅದನ್ನು ಮೀರಿ ಯಾರಾದರು ಶಾಂತಿ ಕದಡುವಂತೆ ಮಾಡಿದರೆ ಕಠಿಣ ಶಿಕ್ಷೆಗೆ ಗುರಿಯಾಗಬೇಕಾಗುತ್ತದೆ ಎಂದು ಶಾಂತಿ ಸಭೆಯ ಪೂರ್ವಭಾವಿ ಸಭೆಯಲ್ಲಿ ಸಿ ಪಿ ಐ ಹೊಸಕೇರಪ್ಪ ಹೇಳಿದರು.ಅವರಿಂದು ಪಟ್ಟಣದ ಪೊಲೀಸ್ ಠಾಣೆ ಯಲ್ಲಿ ಯುಗಾದಿ ಹಾಗೂ ರಂಜಾನ್ ಹಬ್ಬಗಳ ಶಾಂತಿ ಸಭೆಯನ್ನ ಆಯೋಜಿಸಿ ಮಾತನಾಡುತ್ತಾ ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಹಬ್ಬವನ್ನು ಅದ-ಷ್ಟು ಮುಂಜಾಗ್ರತೆ ಕ್ರಮದಿಂದ ಹಿಂದೂ ಮುಸ್ಲಿಂ ಸಹೋದರರ ರೀತಿ ಸೌಹಾರ್ದತೆಯಿಂದ ಕೂಡಿ ಹಬ್ಬ ಆಚರಿಸಬೇಕು ಇದನ್ನು ಪಟ್ಟಣ ಹಾಗೂ ತಾಲೂಕಿನ ನಾಗರಿಕರು ಸಮಯ ಪ್ರಜ್ಞೆಯಿಂದ ಶಾಂತ ರೀತಿಯಿಂದ ಆಚರಿಸಬೇಕು ಯಾವುದೇ ರೀತಿ ಅಹಿತಕರ ಘಟನೆ ಆಗದಂತೆ ಇಲಾಖೆಯ ಜೊತೆ ಪ್ರತಿಯೊಬ್ಬ ನಾಗರಿಕರು ಕೈಜೋಡಿಸಿ ತಾಲೂಕಿನಲ್ಲಿ ಶಾಂತಿಯುತವಾಗಿ ಹಬ್ಬ ಆಚ-ರಿಸಬೇಕು ಈ ಒಂದು ಶಾಂತಿ ಸಭೆಯ ಉದ್ದೇಶ ಪ್ರತಿಯೊಬ್ಬರೂ ತಮ್ಮ ಇಷ್ಟಾರ್ಥ ಪ್ರಾರ್ಥನೆಯನ್ನು ಸಲ್ಲಿಸಿ, ದೇವರ ಕೃಪೆಗೆ ಪಾತ್ರರಾಗಲು ಹಬ್ಬ ಆಚ-ರಣೆಯಾಗಬೇಕು,ಮುಂದಿನ ಪೀಳಿಗೆಗೆ ತಾವು ದೈವಭಕ್ತರೆಂದು ತೋರಿಸಿಕೊಡವ ಹಬ್ಬವಾಗಬೇಕು ತಾಲೂಕಿನಲ್ಲಿ ಇದುವರೆಗೂಯಾವುದೇ ರೀತಿಯ ಅಹಿತಕರ ಘಟನೆ ಆಗದಂತೆ ಇಲಾಖೆಯ ಜೊತೆ ಕೈಜೋಡಿಸಿದ್ದು ಇಲ್ಲಿ ಶ್ಲಾಘನೀಯವಾಗಿ ಸ್ಮ-ರಿಸಬಹುದಾಗಿದೆ ಎಂದರು .ಈ ಸಂದರ್ಭದಲ್ಲಿ ಖಾದರ್ ಭಾಷಾ , ಬಾಬಾ ಖಾಜಿ , ಯುನೊಸ್ ಮುಫ್ತಿ ಸಾಬ್,ಹನುಮಂತ ನಾಯಕ್,ಬಾಲನಗೌಡ , ರಾಜು ತಂಬಾಕೆ , ಮಹಮ್ಮದ್ ಅಭೀಬ್ ಸೇಠ ವಕೀಲರು, ರಫೀ , ಸತ್ತಾರ್ ಸಾಚಅ ನ್ಸರುದ್ದೀನ್ , ಭಾಷಾ ಸಲೀಂ ,ಗೌಸ್ , ಬಾಬಾ ಜಾನಿ , ಸೇರಿದಂತೆ ಅನೇಕರು ಇದ್ದರು .

# ಶ್ರೀ ಶಾಂಭವಿ ಪುಣ್ಯಾಶ್ರಮದಿಂದ ಕಾರುಣ್ಯಾಶ್ರಮಕ್ಕೆ ಶುಭಾಶೀರ್ವಾದ



ನೈಜ್ಯ ದೆಸೆ ನ್ಯೂಸ್

ಸಿಂಧನೂರು: ನಗರದ ಪಿ.ಡಬ್ಲ್ಯೂ.ಡಿ. ಕ್ಯಾಂಪ್‌ನಲ್ಲಿರುವ ಸುಕ್ಷೇತ್ರ ಶ್ರೀ ಶಾಂಭವಿ ಪುಣ್ಯಾಶ್ರಮದಲ್ಲಿ ಕ್ರೋಧಿ ನಾಮ ಸಂವತ್ಸರದ ಯುಗಾದಿ ಹಬ್ಬದ ಅಂಗವಾಗಿ ಹಮ್ಮಿಕೊಂಡಿದ್ದ ವಿಶೇಷ ಧಾರ್ಮಿಕ ಮಹಾಸಭೆಯು ಅತ್ಯಂತ ಸಡಗರ-ಸಂಭ್ರಮದಿಂದ ಜರುಗಿ-ತು.ಆಶ್ರಮದ ಪೀಠಾಧಿಪತಿಗಳಾದ ವೇದಮೂರ್ತಿ ವೀರೇಶ ಯಡಿಯೂರುಮಠ ಮಹಾಸ್ವಾಮಿಗಳ ದಿವ್ಯ ಸಾನ್ನಿಧ್ಯದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಸಮಾಜದ ವಿವಿಧ ಸ್ತರದ ಗಣ್ಯರು ಭಾಗವಹಿಸಿ ಹಬ್ಬದ ಶುಭಾಶಯಗಳನ್ನು ವಿನಿಮಯ ಮಾಡಿಕೊಂಡರು.ಇದೇ ಸುಸಂದರ್ಭದಲ್ಲಿ, ಸಿಂಧನೂರು ನಗರದ 'ಕಾರುಣ್ಯ ನೆಲೆ' ವೃದ್ಧಾಶ್ರಮ ಹಾಗೂ ವಯಸ್ಕರ ಬುದ್ಧಿಮಾಂದ್ಯ ಆಶ್ರಮದ ಮೂಲಕ ಅನಾಥರಿಗೆ ಮತ್ತು ಹಿರಿಯ ನಾಗರಿಕ-ರಿಗೆ ಆಸರೆಯಾಗಿ ನಿಂತಿರುವ ಕಾರ್ಯಾಧ್ಯಕ್ಷ ಡಾ. ಚನ್ನಬಸವ ಸ್ವಾಮಿ ಹಿರೇಮಠ ಅವರ ನಿಸ್ವಾರ್ಥ ಸೇವೆಯನ್ನು ಗುರುತಿಸಿ ಗೌರವಿಸಲಾಯಿತು. ವೇದಮೂರ್ತಿ ವೀರೇಶ ಯಡಿಯೂರುಮಠ ಮಹಾಸ್ವಾಮಿಗಳು ಅವರಿಗೆ ಸನ್ಮಾನ ನೆರವೇರಿಸಿ, ಆದಿಶಕ್ತಿ ಶ್ರೀ ಶಾಂಭವಿ ದೇವಿಯ ಭಾವಚಿತ್ರವನ್ನು ನೆನಪಿನ ಕಾಣಿಕೆಯಾಗಿ ನೀಡಿ ಆಶೀರ್ವದಿಸಿದರು.ಕಾರ್ಯಕ್ರಮದಲ್ಲಿ ಆಶೀರ್ವಚನ ನೀಡಿದ ವೀರೇಶ ಯಡಿಯೂರುಮಠ ಶ್ರೀಗಳು, "ಹೊಸ ವರ್ಷವು ಎಲ್ಲರ ಬಾಳಿನಲ್ಲಿ ಶಾಂತಿ, ನೆಮ್ಮದಿ ತರಲಿ. ಸಮಾಜದಲ್ಲಿ ನೊಂದವರಿಗೆ ಆಸರೆಯಾಗುವ ಕಾರ್ಯಗಳು ನಿರಂತರವಾಗಿ ನಡೆಯಲಿ. ಡಾ. ಚನ್ನಬಸವ ಸ್ವಾಮಿ ಅವರಂತಹ ಸೇವಾ ಮನೋಭಾವದ ವ್ಯಕ್ತಿಗಳು ನಮ್ಮ ನಾಡಿನ ಆಸ್ತಿ," ಎಂದು ಶ್ಲಾಘಿಸಿದರು.ಈ ಧಾರ್ಮಿಕ ಮಹಾಸಭೆಯಲ್ಲಿ ಮಾಜಿ ತಾಲೂಕು ಪಂಚಾಯತ್ ಅಧ್ಯಕ್ಷರಾದ ಅಯ್ಯನಗೌಡ ಆಯನೂರು, ಪ್ರಮುಖರಾದ ಶಿವಶರಣ ಸ್ವಾಮಿ, ವಾಣಿ ವೀರೇಶ ಯಡಿಯೂರುಮಠ ಸೇರಿದಂತೆ ಪುಣ್ಯಾಶ್ರಮದ ಭಕ್ತಾದಿಗಳು ಹಾಗೂ ನಗರದ ಗಣ್ಯರು ಹೆಚ್ಚಿನ ಸಂಖ್ಯೆಯಲ್ಲಿ ಉಪಸ್ಥಿತರಿದ್ದರು.

# ಮಹಿಳಾಗಾಗಿ ಉಚಿತ ಯೋಗ ಶಿಬಿರ ಸಮಾರೋಪ ಯೋಗದಿಂದ ಆರೋಗ್ಯ- ಮನಶಾಂತಿ ಸಾಧ್ಯ : ಕರಿಬಸಪ್ಪ

ನೈಜ್ಯ ದೆಸೆ ನ್ಯೂಸ್





ಮಾನ್ವಿ : ಪಟ್ಟಣದ ಯೋಗ ಸನ್ನಿಧಿಯಲ್ಲಿ ಯೋಗ ಸನ್ನಿಧಿ ಜ್ಞಾನ ವಿದ್ಯಾಪೀಠ ಟ್ರಸ್ಟ್, ಮಾನ್ವಿ ಹಾಗೂ ಖ್ಯಾತ ಅದಿತಿ ಟ್ರಸ್ಟ್ ಅವರ ಸಂಯುಕ್ತ ಆಶ್ರಯದಲ್ಲಿ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯ ಅಂಗವಾಗಿ ಮಹಿಳೆಯರಿಗಾಗಿ ಏರ್ಪಡಿಸಲಾಗಿದ್ದ 1 ವಾರದ ಉಚಿತ ಯೋಗ ಶಿಬಿರದ ಸಮಾರೋಪ ಸಮಾರಂಭ ಭಕ್ತಿಭಾವ ಮತ್ತು ಉತ್ಸಾಹದ ವಾತಾವರಣದಲ್ಲಿ ಜರುಗಿತು. ಶಿಬಿರದಲ್ಲಿ ವಿವಿಧ ವಯೋಮಾನದ ಮಹಿಳೆಯರು ಭಾಗವಹಿಸಿ ಯೋಗಾಭ್ಯಾಸಗಳ ಮೂಲಕ ಆರೋಗ್ಯದ ಮಹತ್ವವನ್ನು ಅರಿತುಕೊಂಡರು.ಈ ಸಂದರ್ಭದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಬೆಂಗಳೂರು ಸ್ವಾಮಿ ವಿವೇಕಾನಂದ ಯೋಗ ವಿಶ್ವವಿದ್ಯಾಲಯದ ಖ್ಯಾತ ಯೋಗ ಗುರು ಕರಿಬಸಪ್ಪ ಜೀ ಮಾತನಾಡಿ, ಯೋಗವು ಮಾನವನ ಜೀವನದಲ್ಲಿ ಅತ್ಯಂತ ಮಹತ್ವದ ಸ್ಥಾನವನ್ನು ಹೊಂದಿದ್ದು, ಇದು ಕೇವಲ ದೇಹದ ಆರೋಗ್ಯವನ್ನು ಕಾಪಾಡುವುದಲ್ಲದೆ ಮನಸ್ಸಿನ ಸಮತೋಲನ, ಒತ್ತಡ ನಿವಾರಣೆ ಹಾಗೂ ಆಂತರಿಕ ಶಾಂತಿಯನ್ನು ನೀಡುತ್ತದೆ ಎಂದು ಹೇಳಿದರು. ನಿಯಮಿತ ಯೋಗಾಭ್ಯಾಸದಿಂದ ದೀರ್ಘಕಾಲದ ಕಾಯಿಲೆಗಳನ್ನು ನಿಯಂತ್ರಿಸಬಹುದಾಗಿ ಹಾಗೂ ಆರೋಗ್ಯಕರ ಜೀವನ ನಡೆಸಲು ಸಾಧ್ಯವೆಂದು ಅವರು ತಿಳಿಸಿದರು. ಇಂದಿನ ಯಾಂತ್ರಿಕ ಜೀವನದಲ್ಲಿ ಯೋಗದ ಅವಶ್ಯಕತೆ ಇನ್ನಷ್ಟು ಹೆಚ್ಚಾಗಿದೆ ಎಂದು ಅವರು ಅಭಿಪ್ರಾಯಪಟ್ಟರು.ಕಾರ್ಯಕ್ರಮವನ್ನು ಅಧ್ಯಕ್ಷತೆ ವಹಿಸಿ ಮಾತನಾಡಿದ ಅಂಬಿಕಾ ಮಧುಸೂದನ್, ಮಹಿಳೆಯರು ಮನೆಯ ಜವಾಬ್ದಾ-ರಿಗಳ ನಡುವೆ ತಮ್ಮ ಆರೋಗ್ಯವನ್ನು ನಿರ್ಲಕ್ಷಿಸುವುದು ಸಾಮಾನ್ಯವಾಗಿದ್ದು, ಇಂತಹ ಯೋಗ ಶಿಬಿರಗಳು ಅವರಿಗೆ ಆರೋಗ್ಯದ ಬಗ್ಗೆ ಜಾಗೃತಿ ಮೂಡಿಸಲು ಬಹಳ ಉಪಯುಕ್ತವಾಗಿವೆ ಎಂದು ಹೇಳಿದರು. ಯೋಗವನ್ನು ದಿನನಿತ್ಯದ ಜೀವನದಲ್ಲಿ ಅಳವಡಿಸಿಕೊಂಡರೆ ದೈಹಿಕ ಮತ್ತು ಮಾನಸಿಕವಾಗಿ ಸದೃಢರಾಗಲು ಸಾಧ್ಯವೆಂದು ಅವರು ಕರೆ ನೀಡಿದರು. ಮಹಿಳೆಯರ ಆರೋಗ್ಯವೇ ಕುಟುಂಬದ ಹಾಗೂ ಸಮಾಜದ ಆರೋಗ್ಯದ ಆಧ-ಾರವಾಗಿರುವುದರಿಂದ, ಪ್ರತಿಯೊಬ್ಬ ಮಹಿಳೆಯೂ ತಮ್ಮ ಆರೋಗ್ಯದ ಕಡೆ ಹೆಚ್ಚಿನ ಗಮನ ಹರಿಸಬೇಕು ಎಂದು ಅವರು ಹೇಳಿದರು.ಕಾರ್ಯಕ್ರಮದ ಅಂಗವಾಗಿ ಶತಾಯುಷಿ ರಾಮಲಿಂಗಮ್ಮ ನಂದಿಹಾಳ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ಅವರ ದೀರ್ಘಾಯುಷ್ಯ ಮತ್ತು ಆರೋಗ್ಯಕರ ಜೀವನ ಶೈಲಿ ಎಲ್ಲರಿಗೂ ಪ್ರೇರಣೆಯಾಗಿದ್ದು.ಲಿಂಗಸಗೂರು ಸ್ವಾಮಿ ವಿವೇಕಾನಂದ ಆಯುರ್ವೇದಿಕ್ ಮೆಡಿಕಲ್ ಕಾಲೇಜಿನ ಪ್ರಾಚಾರ್ಯ ರಾಜಶೇಖರ್ ಹೆಚ್ ಅವರು ಯೋಗ ಶಿಬಿರಾರ್ಥಿಗಳಿಗೆ ಯೋಗ ಮ್ಯಾಟ್‌ಗಳನ್ನು ವಿತರಿಸಿ, ಯೋಗಾಭ್ಯಾಸವನ್ನು ನಿರಂತರವಾಗಿ ಮುಂದುವರಿಸಲು ಪ್ರೋತ್ಸಾಹಿಸಿದರು.ಈ ಸಂದರ್ಭದಲ್ಲಿ ಗೌರಮ್ಮ ಮಹಾಂತಯ್ಯ ಸ್ವಾಮಿ, ದೀಪ್ತಿ, ಸುಮಾ ಶಂಕರಗೌಡ, ಮಂಜುಳಾ ದೇವಯ್ಯ ಶಿವಪೂಜಿ, ಶಿಕ್ಷಕರಾದ ಶರಣಯ್ಯ ಸ್ವಾಮಿ, ಯೋಗ ಗುರುಗಳಾದ ಅನ್ನದಾನಯ್ಯ ಸ್ವಾಮಿ ಸೇರಿದಂತೆ ಅನೇಕ ಶಿಬಿರಾರ್ಥಿಗಳು ಹಾಗೂ ಸ್ಥಳೀಯರು ಉಪಸ್ಥಿತರಿದ್ದರು. ಕಾರ್ಯಕ್ರಮದ ಯಶಸ್ಸಿಗೆ ಟ್ರಸ್ಟ್

## ಸಾಹಿತ್ಯ ಸಿಂಚನ

ಕವಿತೆ ಬರೆಯುತ್ತೇನೆ..!

ನಿತ್ಯವೂ ಕವಿತೆಯೆಂಬ
ಹಣತೆ ಹಚ್ಚುತ್ತಿದ್ದೇನೆ..
ಜಗವ ಬೆಳಕಾಗಿಸುತ
ಬೆಳಗಿಸಲಿಕ್ಕಾಗಿ ಅಲ್ಲ..
ದಿನಾ ನನ್ನೊಳಗೊಂದು
ಬೆಳಕು ಮೂಡಿಸಲಿಕ್ಕಾಗಿ.!

ನಿತ್ಯವೂ ಕವಿತೆಯೆಂಬ
ಪ್ರಣತೆ ಬೆಳಗುತ್ತಿದ್ದೇನೆ..
ನಾ ಕಂಡ ಸತ್ಯಗಳ
ಪ್ರತಿಪಾದನೆಗಾಗಿ ಅಲ್ಲ
ಕಾಣದ ಸತ್ಯಗಳಾ
ಅರಿವು ಅನ್ವೇಷಣೆಗಾಗಿ.!

ನಿತ್ಯವೂ ಕವಿತೆಯೆಂಬ
ಭಾವದೊರತೆ ಹರಿಸುತ್ತಿದ್ದೇನೆ
ಬರಡಾದ ಹೃದಯಗಳ
ಹಸಿರಾಗಿಸಲಿಕ್ಕಾಗಿ ಅಲ್ಲ.!
ನನ್ನ ಹೃದಯ ಕೊರಡಾಗದೆ
ಮಿಡಿದು ಉಸಿರಾಡಲಿಕ್ಕಾಗಿ.!

ನಿತ್ಯವೂ ಕವಿತೆಯೆಂಬ
ಅಕ್ಷರದೊರತೆ ಸ್ಫುರಿಸುತ್ತಿದ್ದೇನೆ
ಓದುವವರ ತಿದ್ದುತಲಿ
ಬದಲಾಯಿಸಲಿಕ್ಕಾಗಿ ಅಲ್ಲ
ನನ್ನ ಚಿಂತನೆಗಳ ಜಾಹೀರಾಗಿಸಿ
ತಪ್ಪಿದ್ದರೆ ಬದಲಿಸಿಕೊಳ್ಳಲಿಕ್ಕಾಗಿ.!

ನಿತ್ಯವೂ ಕವಿತೆಯೆಂಬ
ತಪದ ಜೊತೆ ಜೀವಿಸುತ್ತಿದ್ದೇನೆ
ಕಾವ್ಯಲೋಕದಿ ಮಿನುಗುತಲಿ
ಝೇಂಕರಿಸಲಿಕ್ಕಾಗಿ ಅಲ್ಲ
ಅರಿವು ಅಂತಃಕರಣ ಸಾಕ್ಷೀಕರಿಸಿ
ಅಕ್ಷರಜ್ಯೋತಿ ಸಾಕ್ಷಾತ್ಕರಿಸಿಲಿಕ್ಕಾಗಿ.!

ಎ.ಎನ್.ರಮೇಶ್.ಗುಬ್ಬಿ

# ಮುಂದಿನ 48 ಗಂಟೆಗಳ ಕಾಲ ರಾಜ್ಯದಾದ್ಯಂತ ಭಾರೀ ಮಳೆ

## ಮುನ್ನೆಚ್ಚರಿಕೆ – ಹಲವು ಜಿಲ್ಲೆಗಳಿಗೆ 'ಆರೆಂಜ್ ಅಲರ್ಟ್' ಘೋಷಣೆ.



◆ ನೈಜ್ಯ ದೆಸೆ ನ್ಯೂಸ್

ಬೆಂಗಳೂರು: ಕಳೆದ ಕೆಲವು ದಿನಗಳ ಹಿಂದೆ ರಾಜ್ಯದ ಕೆಲವು ಭಾಗಗಳಲ್ಲಿ ಆಲಿಕಲ್ಲು ಮಳೆಯಾಗಿ ಕರ್ನಾಟಕವು 'ಮಿನಿ ಕಾಶ್ಮೀರ'ದಂತೆ ಭಾಸವಾಗಿ-ತ್ತು. ಇದೀಗ ಭಾರತೀಯ ಹವಾಮಾನ ಇಲಾಖೆ (IMD) ರಾಜ್ಯದ ಜನತೆಗೆ ಮತ್ತೊಂದು ಪ್ರಮುಖ ಎಚ್ಚರಿಕೆ ನೀಡಿದ್ದು, ಮುಂದಿನ ಎರಡು ದಿನಗಳ ಕಾಲ ಕರ್ನಾಟಕದ ಹಲವೆಡೆ ಗುಡುಗು ಸಹಿತ ಭಾರೀ ಮಳೆಯಾಗುವ ಸಾಧ್ಯತೆಯಿದೆ ಎಂದು ತಿಳಿಸಿದೆ.ಹವಾಮಾನ ವೈಪರೀತ್ಯದ ಹಿನ್ನೆಲೆಯಲ್ಲಿ ಈ ಕೆಳಗಿನ ಜಿಲ್ಲೆಗಳಲ್ಲಿ 'ಆರೆಂಜ್ ಅಲರ್ಟ್' (Orange Alert) ಘೋಷಿಸಲಾಗಿದೆ:ಬೀದರ್, ಕಲಬುರಗಿ, ಯಾದಗಿರಿ, ರಾಯಚೂರು, ಬೆಳಗಾವಿ, ಧಾರವಾಡ,ಶಿವಮೊಗ್ಗ, ಉಡುಪಿ, ದಕ್ಷಿಣ ಕನ್ನಡ, ಚಿಕ್ಕಮಗಳೂರು, ಹಾಸನ, ಕೊಡಗು,ಮೈಸೂರು, ಮಂಡ್ಯ, ಚಾಮರಾಜನಗರ, ದಾವಣಗೆರೆ, ತುಮಕೂರು,ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ ಹಾಗೂ ಬೆಂಗಳೂರು ದಕ್ಷಿಣ. ಮಳೆಯ ತೀವ್ರತೆ ಹೆಚ್ಚಿರುವ ಕಾರಣ ಸಾರ್ವಜನಿಕರು ಈ ಕೆಳಗಿನ ಮುನ್ನೆಚ್ಚರಿಕೆಗಳನ್ನು ಪಾಲಿಸಲು ಸೂಚಿಸಲಾಗಿದೆ:ಮಳೆ ಬರುವ ಮುನ್ಸೂಚನೆ ಕಂಡ ಕೂಡಲೇ ಜನರು ಸುರಕ್ಷಿತ ಕಟ್ಟಡಗಳ ಒಳಗೆ ಆಶ್ರಯ ಪಡೆಯಬೇಕು. ಮರಗಳ ಕೆಳಗೆ ಅಥವಾ ವಿದ್ಯುತ್ ಕಂಬಗಳ ಬಳಿ ನಿಲ್ಲಬಾರದು.ಕೊಯ್ಲು ಮಾಡಿದ ಬೆಳೆಗಳನ್ನು ಸುರಕ್ಷಿತ ಸ್ಥಳಗಳಲ್ಲಿ ಸಂಗ್ರಹಿಸಿಡಲು ಹಾಗೂ ಕೃಷಿ ಚಟುವಟಿಕೆಗಳ ವೇಳೆ ಹವಾಮಾನದ ಮೇಲೆ ನಿಗಾ ಇಡಲು ಕೋರಲಾಗಿದೆ.ಭಾ-ರೀ ಮಳೆಯಿಂದಾಗಿ ರಸ್ತೆಗಳು ಜಾರುವ ಸಾಧ್ಯತೆ ಇರುವುದರಿಂದ ವಾಹನ ಸವಾರರು ಜಾಗರೂಕತೆಯಿಂದ ಚಲಿಸಬೇಕು. ತಗ್ಗು ಪ್ರದೇಶಗಳಲ್ಲಿ ನೀರು ನುಗ್ಗುವ ಸಂಭವವಿರುವುದರಿಂದ ಮುನ್ನೆಚ್ಚರಿಕೆ ವಹಿಸಬೇಕು.ಯಾವುದೇ ತುರ್ತು ಸಂದರ್ಭಗಳಲ್ಲಿ ಜಿಲ್ಲಾಡಳಿತದ ಸಹಾಯವಾಣಿ ಅಥವಾ 112 ಸಂಖ್ಯೆಗೆ ಕರೆ ಮಾಡಿ ನೆರವು ಪಡೆಯಬಹುದು.

# ಸಮಾಜ ಸೇವಕ ಅಸ್ಕಿಗೆ ಮುಸ್ಲಿಂ ಸಮಾಜದಿಂದ ಸನ್ಮಾನ




◆ ನೈಜ್ಯ ದೆಸೆ ನ್ಯೂಸ್

ತಾಳಿಕೋಟಿ : ಅಸ್ಕಿ ಫೌಂಡೇಶನ್ ಕೊಣ್ಣೂರ ಅಧ್ಯಕ್ಷ, ಕಾಂಗ್ರೆಸ್ ಮುಖಂಡ ಸಮಾಜ ಸೇವಕರಾದ ಸಿ.ಬಿ.ಅಸ್ಕಿ ಅವರನ್ನು ಸ್ಥಳೀಯ ಮುಸ್ಲಿಂ ಸಮಾಜದ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು. ಪವಿತ್ರ ರಮಜಾನ ಮಾಸದ ಅಂಗವಾಗಿ ಪಟ್ಟಣದಲ್ಲಿ ಇತ್ತೀಚಿಗೆ ಹಮ್ಮಿಕೊಂಡ ಸೌಹಾರ್ದ ಇಫ್ತಾರ ಕೂಟ ಕಾರ್ಯಕ್ರಮದಲ್ಲಿ ಅವರ ಸಮಾಜಮುಖಿ ಕಾರ್ಯಗಳಿಗಾಗಿ ಸನ್ಮಾನಿಸಿ ಗೌರವಿಸಲಾಯಿತು. ಸನ್ಮಾನ ಸ್ವೀಕರಿಸಿ ಮಾತನಾಡಿದ ಮುಖಂಡ ಸಿ.ಬಿ.ಅಸ್ಕಿ ಅವರು ನಿಮ್ಮೆಲ್ಲರ ಸಹಕಾರದಿಂದ ಕಳೆದ 8 ವರ್ಷಗಳಿಂದ ರಮಜಾನ ಮಾಸದಲ್ಲಿ ಸೌಹಾರ್ದ ಇಫ್ತಾರ ಕೂಟಗಳನ್ನು ಹಮ್ಮಿಕೊಳ್ಳುತ್ತಿದ್ದೇನೆ. ಜಾತಿ ಮತ ಭೇದವಿಲ್ಲದೆ ಸಮಾಜದಲ್ಲಿರುವ ಎಲ್ಲ ಬಡವರ ಸೇವೆಯನ್ನು ನನ್ನ ಸಾಮರ್ಥ್ಯಕ್ಕೆ ಅನುಸಾರವಾಗಿ ಮಾಡುತ್ತಿದ್ದೇನೆ ಇದಕ್ಕೆ ನಿಮ್ಮೆಲ್ಲರ ಸಹಕಾರ ಮತ್ತು ಪ್ರೋತ್ಸಾಹವೇ ಕಾರಣ ನಾವೆಲ್ಲರೂ ಭಾರತೀಯರು, ನಾವೆಲ್ಲರೂ ಒಂದೇ ತಂದೆ ತಾಯಿಯ ಮಕ್ಕಳಂತೆ ನಮಗೆ ಬಾಳಬೇಕಾಗಿದೆ ದೇಶ ಕಟ್ಟುವ ಕೆಲಸ ನಾವೆಲ್ಲರೂ ಕೂಡ ಮಾಡಬೇಕಾಗಿದೆ ಆದ್ದರಿಂದಲೇ ನಾನು ಎಲ್ಲ ಸಮಾಜದ ಜನರನ್ನು ಕೂಡಿಸಿಕೊಂಡು ಇಂತಹ ಸೌಹಾರ್ದ ಕೆಲಸವನ್ನು ಮಾಡುತ್ತಿದ್ದೇನೆ ಎಂದರು. ಮುಸ್ಲಿಂ ಧಾರ್ಮಿಕ ಮುಖಂಡ ಸೈಯದ್ ಶಕೀಲ ಅಹ್ಮದ್ ಖಾಜಿ ಸಮಾರಂಭದ ಸಾನಿಧ್ಯ ವಹಿಸಿದ್ದರು. ಕಾರ್ಯಕ್ರಮದಲ್ಲಿ ಗಣ್ಯರಾದ ಮಾಸೂಮಸಾಬ ಕೆಂಭಾವಿ ,ಕೆ.ಐ.ಸಗರ,ಹಸನಸಾಬ ಮನಗೂಳಿ,ಕಾಶೀಮಪಟೇಲ ಪಾಟೀಲ, ಶಿವರಾಜ್ ಗುಂಡಕನಕಳ, ವೀರೇಶ ಬಾಗೇವಾಡಿ, ಇಬ್ರಾಹಿಂ ಮನ್ಸೂರ, ಶಮಶುದ್ದೀನ ನಾಲಬಂದ, ಸಿಕಂದರ ಡೋಣಿ, ಮೋದಿನಸಾ ನಗಾರ್ಚಿ,ಹುಸೇನಬಾಷಾ ಜಮಾದಾರ ,ರವಿ ಕಟ್ಟಿಮನಿ,ವಿರೇಶ ಅಸ್ಕಿ ಮತ್ತಿತರರು ಇದ್ದರು.

## ಬಸಾಪುರ ಗ್ರಾಮದ ತುಂಗಭದ್ರ ಎಡದಂಡೆ ಮುಖ್ಯ ಕಾಲುವೆ ಒಡಿದ ಹಿನ್ನೆಲೆ, ಶಾಸಕ ಹಂಪನಗೌಡ ಬಾದರ್ಲಿ ಸ್ಥಳಕ್ಕೆ ಭೇಟಿ ಸಮಗ್ರ ಪರಿಶೀಲನೆ ತುರ್ತು ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ಸೂಚನೆ..

◆ ನೈಜ್ಯ ದೆಸೆ ನ್ಯೂಸ್




ಕೊಪ್ಪಳ : ಕೊಪ್ಪಳ ಜಿಲ್ಲಾ ತಾಲೂಕಿನ ಹಿಟ್ನಾಳ್ ಹೋಬಳಿಯ ಬಸಾಪುರ ಗ್ರಾಮದ ತುಂಗಭದ್ರ ಎಡದಂಡೆ ಮುಖ್ಯ ಕಾಲುವೆಯ ಚೈನೇಜ್ 650 ಹತ್ತಿರ ಕಾಲುವೆ ಒಡಿದ ಹಿನ್ನೆಲೆ, ಮಾನ್ಯ ಶಾಸಕ ಹಂಪನಗೌಡ ಬಾದರ್ಲಿ ಅವರು ಸ್ಥಳಕ್ಕೆ ಭೇಟಿ ನೀಡಿ ಸಮಗ್ರ ಪರಿಶೀಲನೆ ನಡೆಸಿದರು.ಕಾಲುವೆಯ ತೀರ ಭಾಗದಲ್ಲಿ ಉಂಟಾದ ಭಂಗವನ್ನು ಗಮನಿಸಿದ ಅವರು, ತಕ್ಷಣವೇ ತುರ್ತು ಕ್ರಮಗಳನ್ನು ಕೈಗೊಳ್ಳಲು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ನೀರು ವ್ಯರ್ಥವಾಗಿ ಹರಿದು ಹೋಗುವುದರಿಂದ ರೈತರ ಬೆಳೆಗಳಿಗೆ ಉಂಟಾಗುವ ಹಾನಿ ಬಗ್ಗೆ ಆತಂಕ ವ್ಯಕ್ತಪಡಿಸಿದ ಅವರು, ಕಾಲುವೆಯ ಬಲಪಡಿಸುವ ಕಾಮಗಾರಿಯನ್ನು ಶೀಘ್ರ ಆರಂಭಿಸಲು ನಿರ್ದೇಶಿಸಿದರು.ಈ ವೇಳೆ ನೀರಾವರಿ ಇಲಾಖೆಯ ಇಂಜಿನಿಯರ್‌ಗಳು, ತಾಲೂಕು ಆಡಳಿತದ ಅಧಿಕಾರಿಗಳು ಉಪಸ್ಥಿತರಿದ್ದು, ಸಮಸ್ಯೆಯ ತಾಂತ್ರಿಕ ಅಂಶಗಳ ಕುರಿತು ವಿವ-ರಿಸಿದರು. ಕಾಲುವೆ ದುರಸ್ತಿಗೆ ಅಗತ್ಯವಾದ ಯಂತ್ರೋಪಕರಣಗಳು ಮತ್ತು ಮಾನವ ಸಂಪನ್ಮೂಲಗಳನ್ನು ತಕ್ಷಣ ಸ್ಥಳಕ್ಕೆ ಕಳುಹಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಯಿತು.ಸ್ಥಳೀಯ ರೈತರು ಮತ್ತು ಗ್ರಾಮಸ್ಥರು ತಮ್ಮ ಸಂಕಷ್ಟಗಳನ್ನು ವಿವರಿಸಿ, ಶೀಘ್ರ ದುರಸ್ತಿ ಕಾರ್ಯಗಳನ್ನು ಕೈಗೊಳ್ಳುವಂತೆ ಮನವಿ ಮಾಡಿದರು. ಶಾಸಕರು ರೈತರ ಸಮಸ್ಯೆಗಳಿಗೆ ಸ್ಪಂದಿಸಿ, ತಾತ್ಕಾಲಿಕ ಹಾಗೂ ಶಾಶ್ವತ ಪರಿಹಾರಗಳನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಭರವಸೆ ನೀಡಿದರು.ಇದೇ ಸಂದರ್ಭದಲ್ಲಿ, ಮುಂದಿನ ದಿನಗಳಲ್ಲಿ ಇಂತಹ ಸಮಸ್ಯೆಗಳು ಉಂಟಾಗದಂತೆ ಕಾಲುವೆಗಳ ನಿಯಮಿತ ಪರಿಶೀಲನೆ ಮತ್ತು ನಿರ್ವಹಣೆಗೆ ವಿಶೇಷ ಗಮನ ಹರಿಸುವಂತೆ ಸೂಚನೆ ನೀಡಿದರು. ರೈತರ ಹಿತಾಸಕ್ತಿಯನ್ನು ಮೊದಲ ಆದ್ಯತೆಯಾಗಿ ಪರಿಗಣಿಸಿ, ನೀರಾವರಿ ವ್ಯವಸ್ಥೆಯನ್ನು ಸುಧಾರಿಸುವ ದಿಶೆಯಲ್ಲಿ ಸರ್ಕಾರ ಬದ್ಧವಾಗಿದೆ ಎಂಬುದನ್ನು ಅವರು ಸ್ಪಷ್ಟಪಡಿಸಿದರು.

# ಮಾನ್ವಿಯಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆಗಳು ಶಾಂತಿಯುತ ಆರಂಭ

◆ ನೈಜ್ಯ ದೆಸೆ ನ್ಯೂಸ್



ಮಾನ್ವಿ : ಪಟ್ಟಣ ಸೇರಿದಂತೆ ತಾಲೂಕಿನ ವಿವಿಧ ಪರೀಕ್ಷಾ ಕೇಂದ್ರಗಳಲ್ಲಿ ಬುಧವಾರ 2025–26ನೇ ಸಾಲಿನ ಎಸ್.ಎಸ್.ಎಲ್.ಸಿ ಪರೀಕ್ಷೆಗಳು ಶಾಂತಿಯುತವಾಗಿ ನಡೆದವು. ಬೆಳಿಗ್ಗೆ 10 ಗಂಟೆಯಿಂದ ಆರಂಭವಾದ ಪರೀಕ್ಷೆಗೆ ವಿದ್ಯಾರ್ಥಿಗಳು ಉತ್ಸಾಹದಿಂದ ಆಗಮಿಸಿ ಪರೀಕ್ಷೆಗಳನ್ನು ಬರೆದರು.ತಾಲೂಕಿನ ವಿವಿಧ ಪರೀಕ್ಷಾ ಕೇಂದ್ರಗಳಿಗೆ ಎಸ್.ಎಸ್.ಎಲ್.ಸಿ ಪರೀಕ್ಷೆಗಳ ನೋಡಲ್ ಅಧಿಕಾರಿ ಜೀವನ್ ಸಾಬ್ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಶೇಖರ.ಡಿ. ಭೇಟಿ ನೀಡಿ ಪರಿಶೀಲನೆ ನಡೆಸಿದರು. ನೋಡಲ್ ಅಧಿಕಾರಿ ಜೀವನ್ ಸಾಬ್ ಮಾತನಾಡಿ ತಾಲೂಕಿನ ಎಲ್ಲಾ 20 ಪರೀಕ್ಷಾ ಕೇಂದ್ರಗಳಲ್ಲಿ ಮೊದಲನೇ ದಿನ ಕನ್ನಡ ವಿಷಯದ ಪರೀಕ್ಷೆ ವಿದ್ಯಾರ್ಥಿಗಳು ಉತ್ಸಾಹದಿಂದ ಬರೆದಿದ್ದಾರೆ. ಯಾವುದೇ ಅಹಿತಕರ ಘಟನೆಗಳು ನಡೆದಿಲ್ಲ ಎಂದು ತಿಳಿಸಿದರು.ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಶೇಖರ.ಡಿ. ಮಾತನಾಡಿ ಅಖಂಡ ಮಾನವಿ ತಾಲೂಕಿನಲ್ಲಿ ಒಟ್ಟು 20 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆಗಳು ನಡೆದಿದ್ದು, ತಾಲೂಕಿನಲ್ಲಿ 5583 ವಿದ್ಯಾರ್ಥಿಗಳು ನೋಂದಾಯಿಸಿಕೊಂಡಿದ್ದರು. ಮೊದಲ ದಿನದ ಕನ್ನಡ ಪರೀಕ್ಷೆಗೆ 5413 ವಿದ್ಯಾರ್ಥಿಗಳು ಹಾಜರಾಗಿ ಪರೀಕ್ಷೆ ಬರೆದಿದ್ದು, 170 ವಿದ್ಯಾರ್ಥಿಗಳು ಗೈರು ಹಾಜರಿಯಾಗಿದ್ದಾರೆ ಎಂದು ತಿಳಿಸಿದರು. ಪರೀಕ್ಷಾ ಕೇಂದ್ರಗಳಲ್ಲಿ ಸಿ.ಸಿ.ಟೀವಿ ಕಣ್ಗಾವಲು ವ್ಯವಸ್ಥೆ ಮಾಡಲಾಗಿದ್ದು, ನಕಲು ತಡೆಯಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗಿದೆ. 20 ಮುಖ್ಯ ಅಧೀಕ್ಷಕರು, 4 ಉಪ ಮುಖ್ಯ ಅಧೀಕ್ಷಕರು, 20 ಪ್ರಶ್ನೆಪತ್ರಿಕೆ ಅಭಿರಕ್ಷಕರು, 20 ಸ್ಥಾನಿಕ ಜಾಗೃತದಳ ಅಧಿಕಾರಿಗಳು ಹಾಗೂ 7 ಮಾರ್ಗಾಧಿಕಾರಿಗಳು ಕಾರ್ಯನಿರ್ವಹಿಸಿದರು.ಈ ಸಂದರ್ಭದಲ್ಲಿ ಶಿಕ್ಷಣ ಅಧಿಕಾರಿ ಮಹೇಶ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಕೊಪ್ಪಳ ಜಿಲ್ಲಾದ್ಯಂತ ಶಿಸ್ತುಬದ್ಧವಾಗಿ ಆರಂಭಗೊಂಡ ಎಸ್ಸೆಸ್ಸೆಲ್ಸಿ ಪರೀಕ್ಷೆ–1



◆ ನೈಜ್ಯ ದೆಸೆ ನ್ಯೂಸ್

ಕೊಪ್ಪಳ:ಜಿಲ್ಲೆಯಾದ್ಯಂತ ಬುಧವಾರದಂದು ಎಸ್ಸೆಸ್ಸೆಲ್ಸಿ ವಾರ್ಷಿಕ ಪರೀಕ್ಷೆ–1 ಅತ್ಯಂತ ಉತ್ಸಾಹ ಮತ್ತು ಶಿಸ್ತಿನಿಂದ ಆರಂಭಗೊಂಡಿತು. ಮೊದಲ ದಿನ ನಡೆದ ಪ್ರಥಮ ಭಾಷೆಯ ಪರೀಕ್ಷೆಗೆ ವಿದ್ಯಾರ್ಥಿಗಳು ಸಡಗರದಿಂದ ಹಾಜರಾಗುವ ಮೂಲಕ ಪರೀಕ್ಷಾ ಹಬ್ಬಕ್ಕೆ ಚಾಲನೆ ನೀಡಿದರು. ಜಿಲ್ಲೆಯ ಒಟ್ಟು 74 ಕೇಂದ್ರಗಳಲ್ಲಿ ಪರೀಕ್ಷೆ ನಡೆದಿದ್ದು, ಬೆಳಿಗ್ಗೆಯಿಂದಲೇ ವಿದ್ಯಾರ್ಥಿಗಳು ಪೋಷಕರೊಂದಿಗೆ ಕೇಂದ್ರಗಳ ಮುಂದೆ ಸಾಲುಗಟ್ಟಿ ನಿಂತಿದ್ದರು. ನೋಟಿಸ್ ಬೋರ್ಡ್‌ಗಳಲ್ಲಿ ತಮ್ಮ ನೋಂದಣಿ ಸಂಖ್ಯೆ ಮತ್ತು ಬ್ಲಾಕ್ ಸಂಖ್ಯೆಗಳನ್ನು ಖಚಿತಪಡಿಸಿಕೊಂಡು, ಆತ್ಮವಿಶ್ವಾಸದಿಂದ ಪರೀಕ್ಷಾ ಕೊಠಡಿಗಳನ್ನು ಪ್ರವೇಶಿಸಿದರು. ಅನೇಕ ಕೇಂದ್ರಗಳಲ್ಲಿ ವಿದ್ಯಾರ್ಥಿಗಳಿಗೆ ಹೂವು ನೀಡಿ ಅಥವಾ ಸಿಹಿ ನೀಡಿ ಸ್ವಾಗತಿಸುವ ಮೂಲಕ ಅವರಲ್ಲಿದ್ದ ಆತಂಕವನ್ನು ದೂರಮಾಡುವ ಪ್ರಯತ್ನ ಮಾಡಲಾಗಿತ್ತು.ಜಿಲ್ಲೆಯಲ್ಲಿ ಪ್ರಥಮ ಭಾಷೆ ಪರೀಕ್ಷೆಗೆ ಒಟ್ಟು 23,080 ವಿದ್ಯಾರ್ಥಿಗಳು ನೋಂದಣಿ ಮಾಡಿಕೊಂಡಿದ್ದರು. ಈ ಪೈಕಿ 22,701 ಅಭ್ಯರ್ಥಿಗಳು ಪರೀಕ್ಷೆ ಬರೆದಿದ್ದು, 379 ವಿದ್ಯಾರ್ಥಿಗಳು ಗೈರುಹಾಜರಾಗಿದ್ದಾರೆ. ಜಿಲ್ಲಾಡಳಿತ ಹಾಗೂ ಶಾಲಾ ಶಿಕ್ಷಣ ಇಲಾಖೆಯ ವತಿಯಿಂದ ಯಾವುದೇ ಅಕ್ರಮಗಳಿಗೆ ಅವಕಾಶವಿಲ್ಲದಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗಿದೆ.ಪ್ರತಿ ಕೇಂದ್ರದ ಸುತ್ತ 200 ಮೀಟರ್ ಪ್ರದೇಶದಲ್ಲಿ 144ನೇ ನಿರೋಧಕ ಆಜ್ಞೆ ಜಾರಿಗೊಳಿಸಲಾಗಿತ್ತು. ಡಿಡಿಪಿಐ, ಬಿಇಓಗಳು ಮತ್ತು ಜಿಲ್ಲಾ ಮಟ್ಟದ ನೋಡಲ್ ಅಧಿಕಾರಿಗಳು ವಿವಿಧ ಕೇಂದ್ರಗಳಿಗೆ ಭೇಟಿ ನೀಡಿ ಪರೀಕ್ಷಾ ವ್ಯವಸ್ಥೆಯನ್ನು ಪರಿಶೀಲಿಸಿದರು.ಕುಡಿಯುವ ನೀರು, ಪ್ರಥಮ ಚಿಕಿತ್ಸೆ ಹಾಗೂ ಸೂಕ್ತ ಬೆಳಕಿನ ವ್ಯವಸ್ಥೆಯನ್ನು ಪ್ರತಿ ಕೇಂದ್ರದಲ್ಲೂ ಕಲ್ಪಿಸಲಾಗಿತ್ತು."ಜಿಲ್ಲೆಯಲ್ಲಿ ಪರೀಕ್ಷೆಯ ಮೊದಲ ದಿನ ಶಾಂತಿಯುತವಾಗಿ ಮುಕ್ತಾಯಗೊಂಡಿದೆ. ವಿದ್ಯಾರ್ಥಿಗಳು ಯಾವುದೇ ಆತಂಕವಿಲ್ಲದೆ ಮುಂದಿನ ಪರೀಕ್ಷೆಗಳನ್ನು ಎದುರಿಸಬೇಕು. ಪರೀಕ್ಷಾ ಪಾರದರ್ಶಕತೆ ಕಾಪಾಡಲು ಇಲಾಖೆ ಸಂಪೂರ್ಣ ಬದ್ಧವಾಗಿದೆ." – ಜಿಲ್ಲಾ ಉಪನಿರ್ದೇಶಕರು (ಆಡಳಿತ), ಶಾಲಾ ಶಿಕ್ಷಣ ಇಲಾಖೆ.

# ನಿಡಶೇಸಿ ಕೆರೆ ಹಾಗೂ ಉದ್ಯಾನವನಕ್ಕೆ ನವಕಳೆ : ಪರಿಸರ ಪ್ರೇಮಿಗಳ ಶ್ರಮದಾನಕ್ಕೆ ಕೈಜೋಡಿಸಿದ ವಿವಿಧ ಇಲಾಖೆಗಳು

◆ ನೈಜ್ಯ ದೆಸೆ ನ್ಯೂಸ್



ಕುಷ್ಟಗಿ: ಪಟ್ಟಣದ ಹೊರವಲಯದ ಗಜೇಂದ್ರಗಡ ರಾಜ್ಯ ಹೆದ್ದಾರಿಗೆ ಹೊಂದಿಕೊಂಡಿರುವ, ದಶಕಗಳಿಂದ ನಿರ್ಲಕ್ಷ್ಯಕ್ಕೆ ಒಳಗಾಗಿದ್ದ ನಿಡಶೇಸಿ ಕೆರೆ ಮತ್ತು ಸಾರ್ವಜನಿಕ ಉದ್ಯಾನವನಕ್ಕೆ ಈಗ ಪುನರ್ಜನ್ಮ ನೀಡುವ ಕಾರ್ಯ ಭರದಿಂದ ಸಾಗಿದೆ. ಸ್ಥಳೀಯ ಪರಿಸರ ಪ್ರೇಮಿಗಳು, ಗೆಳೆಯರ ಬಳಗ ಹಾಗೂ ವಿವಿಧ ಸರ್ಕಾರಿ ಇಲಾಖೆಗಳ ಸಮನ್ವಯದೊಂದಿಗೆ ಈ ಪ್ರದೇಶವನ್ನು ಸುಂದರ ಪ್ರವಾಸಿ ತಾಣವನ್ನಾಗಿ ರೂಪಿಸಲು ಸಜ್ಜುಗೊಳಿಸಲಾಗುತ್ತಿದೆ.ಮಂಗಳವಾರ ಈ ಪುನಶ್ಚೇತನ ಕಾರ್ಯ ನಡೆಯುತ್ತಿದ್ದ ಸ್ಥಳಕ್ಕೆ ಹಿರಿಯ ಸಿವಿಲ್ ನ್ಯಾಯಾಧೀಶರಾದ ಆರ್. ಮಂಜುನಾಥ್ ಅವರು ಭೇಟಿ ನೀಡಿ ಪರಿಶೀಲಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, "ಸಮುದಾಯದ ಸಹಭಾಗಿತ್ವವಿದ್ದರೆ ಎಂತಹ ಕಠಿಣ ಕಾರ್ಯವನ್ನೂ ಸಾಧಿಸಬಹುದು. ಗೆಳೆಯರ ಬಳಗ ಮತ್ತು ಗ್ರಾಮ ಪಂಚಾಯಿತಿ ಅಧಿಕಾರಿ ಶ್ರೀಶೈಲ ಪೊಲೀಸಿ ಅವರ ನೇತೃತ್ವದಲ್ಲಿ ನಡೆಯುತ್ತಿರುವ ಈ ಪರಿಸರ ಸೇವೆ ಶ್ಲಾಘನೀಯ," ಎಂದರು. ಅಲ್ಲದೆ, ಮುಂಬರುವ ಮಾರ್ಚ್ 22ರ ವಿಶ್ವ ಜಲ ದಿನಾಚರಣೆಯ ಅಂಗವಾಗಿ, ಮಾರ್ಚ್ 25ರಂದು ಕೆರೆ ತಟದಲ್ಲಿಯೇ ಜನಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲು ಅವರು ಸಲಹೆ ನೀಡಿದರು.ಸತತವಾಗಿ ಉದ್ಯಾನವನದ ಸ್ವಚ್ಛತಾ ಕಾರ್ಯದಲ್ಲಿ ತೊಡಗಿಸಿಕೊಂಡಿದೆ,ಶ್ರಮದಾನಕ್ಕೆ ಅಗತ್ಯ ಸೌಲಭ್ಯ ಹಾಗೂ ಸಹಕಾರ ನೀಡುತ್ತಿದೆ. ಉದ್ಯಾನದ ಸುತ್ತ ಆವರಿಸಿದ್ದ ಮುಳ್ಳುಕಂಟಿಗಳನ್ನು ತೆರವುಗೊಳಿಸಿ ಸುಗಮ ಸಂಚಾರಕ್ಕೆ ಹಾದಿ ಮಾಡಿಕೊಟ್ಟಿದೆ,ಉದ್ಯಾನದ ಸೌಂದರ್ಯೀಕರಣ-ಕ್ಕೆ ವಿವಿಧ ಜಾತಿಯ ಸಸಿಗಳನ್ನು ನಾಟಿ ಮಾಡಲು ಮತ್ತು ಹಸಿರು ವಲಯ ನಿರ್ಮಿಸಲು ಒಪ್ಪಿಗೆ ಸೂಚಿಸಿವೆ.ಕೆರೆ ತುಂಬಿಸುವ ಯೋಜನೆಯಿಂದಾಗಿ ನಿಡಶೇಸಿ ಕೆರೆಯು ಈಗ ವರ್ಷಪೂರ್ತಿ ನೀರಿನಿಂದ ಸಮೃದ್ಧವಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಇಲ್ಲಿ ದೋಣಿ ವಿಹಾರ (ಃಡಿಚಿಣuಟಿರ) ವ್ಯವಸ್ಥೆ ಮಾಡುವ ಕುರಿತು ಅಧಿಕಾರಿಗಳ ಮಟ್ಟದಲ್ಲಿ ಚರ್ಚೆ ನಡೆಯಿತು. ಇದು ಸಾಧ್ಯವಾದಲ್ಲಿ ಕುಷ್ಟಗಿ ತಾಲೂಕಿನ ಪ್ರಮುಖ ಪ್ರವಾಸಿ ಹಾಗೂ ವಿಹಾರ ತಾಣವಾಗಿ ನಿಡಶೇಸಿ ಕೆರೆ ಗುರುತಿಸಿಕೊಳ್ಳಲಿದೆ.ಸಾರ್ವಜನಿಕರ ಸಹಕಾರಕ್ಕೆ ಮನವಿ:ಈ ಪ್ರದೇಶವು ಕೇವಲ ಸರ್ಕಾರಿ ಆಸ್ತಿಯಲ್ಲ, ಇದು ನಮ್ಮೂ-ರಿನ ಶ್ವಾಸಕೋಶವಿದ್ದಂತೆ. ಸಾರ್ವಜನಿಕರು ಉದ್ಯಾನವನದಲ್ಲಿ ಪ್ಲಾಸ್ಟಿಕ್ ಬಳಸದಂತೆ ಹಾಗೂ ಸಸಿಗಳನ್ನು ಸಂರಕ್ಷಿಸುವಲ್ಲಿ ಕೈಜೋಡಿಸಬೇಕೆಂದು ಪರಿಸರ ಪ್ರೇಮಿಗಳು ವಿನಂತಿಸಿದ್ದಾರೆ. ಮುಂದಿನ ದಿನಗಳಲ್ಲಿ ಇಲ್ಲಿ ವಾಕಿಂಗ್ ಪಾತ್ (ಘಚಿಟಞ-ಟಿರ ಕಚಿಣು) ಮತ್ತು ಮಕ್ಕಳಿಗಾಗಿ ಆಟದ ಉಪಕರಣಗಳನ್ನು ಅಳವಡಿಸುವ ಯೋಜನೆಯೂ ಇದೆ.ಈ ಸಂದರ್ಭದಲ್ಲಿ ತಹಶೀಲ್ದಾರ್ ಅಶೋಕ ಶಿಗ್ಗಾವಿ, ಸಿಪಿಐ ವಿಶ್ವನಾಥ ಹಿರೇಗೌಡರ, ಅರಣ್ಯ ಹಾಗೂ ತೋಟಗಾರಿಕೆ ಇಲಾಖೆಯ ಅಧಿಕಾರಿಗಳು, ಪರಿಸರ ಪ್ರೇಮಿ ಗೆಳೆಯರ ಬಳಗದ ಸದಸ್ಯರು ಮತ್ತು ಗ್ರಾಮ ಪಂಚಾಯಿತಿ ಸಿಬ್ಬಂದಿ ಹಾಜರಿದ್ದರು.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### (BOT)

ಬ್ಯಾಚುಲರ್ ಆಫ್ ಆಕ್ಯುಪೇಷನಲ್ ಥೆರಪಿ (BOT) ಒಂದು 4.5 ವರ್ಷಗಳ (4 ವರ್ಷಗಳ ಕೋರ್ಸ್ + 6 ತಿಂಗಳ ಇಂಟರ್ನ್‌ಶಿಪ್) ಪದವಿ ಕೋರ್ಸ್ ಆಗಿದ್ದು, ದೈಹಿಕ ಅಥ–ವಾ ಮಾನಸಿಕ ಸವಾಲುಗಳನ್ನು ಎದುರಿಸುತ್ತಿರುವವ–ರಿಗೆ ಚಟುವಟಿಕೆಗಳ ಮೂಲಕ ಚಿಕಿತ್ಸೆ ನೀಡಲು ಕಲಿಸುತ್ತದೆ. ವಿಜ್ಞಾನ ವಿಭಾಗದಲ್ಲಿ (PCB) 10+2 ಪಾಸಾದವರು ಅರ್ಹರು. 2026–27ರಿಂದ ಕರ್ನಾಟಕದಲ್ಲಿ NEET ಅಂಕಗಳು ಕಡ್ಡಾಯವಾಗಬಹುದುಕೋರ್ಸ್ ಹೆಸರು: ಬ್ಯಾಚುಲರ್ ಆಫ್ ಆಕ್ಯುಪೇಷನಲ್ ಥೆರಪಿ (BOT) ಅವಧಿ: 4.5 ವರ್ಷಗಳು (4 ವರ್ಷಗಳ ಶೈಕ್ಷಣಿಕ ಅಧ್ಯಯನ ಮತ್ತು 6 ತಿಂಗಳ ಕಡ್ಡಾಯ ಇಂಟರ್ನ್‌ಶಿಪ್) ಅರ್ಹತೆ (Eligibility): ಪಿಯುಸಿ/10+2 ನಲ್ಲಿ ಭೌತಶಾಸ್ತ್ರ (Physics), ರಸಾಯನಶಾಸ್ತ್ರ (Chemistry), ಮತ್ತು ಜೀವಶಾಸ್ತ್ರ (Biology) ವಿಷಯಗಳೊಂದಿಗೆ ಉತ್ತೀರ್ಣರಾಗಿರಬೇಕು. ಪ್ರವೇಶಾತಿ (Admission): NEET ಅಥವಾ ಕಾಲೇಜುಗಳ ಪ್ರವೇಶ ಪರೀಕ್ಷೆಗಳ (ಜೆಇಟಿ, ಇತ್ಯಾದಿ) ಮೂಲಕ ಪ್ರವೇಶ ಪಡೆಯಬಹುದು Shiksha.com. ಕೋರ್ಸ್ ಶುಲ್ಕ: ಅಂದಾಜು ₹15,000 ದಿಂದ 4,00,000 (ಕಾಲೇಜಿನ ಆಧಾರದ ಮೇಲೆ) ಕಲಿಯುವ ವಿಷಯಗಳು (Curriculum): ಅನಾಟಮಿ ಮತ್ತು ಫಿಸಿಯಾಲಜಿ ಬಯೋಕೆಮಿಸ್ಟ್ರಿ ಆಕ್ಯುಪೇಷನಲ್ ಥೆರಪಿ ಅಡಿಪಾಯಗಳು ಕ್ಲಿನಿಕಲ್ ಸೈಕಾಲಜಿ ಪುನರ್ವಸತಿ (Rehabilitation) ತಂತ್ರಗಳು ವೃತ್ತಿಜೀವನದ ಅವಕಾಶಗಳು (Career Options): ಆಸ್ಪತ್ರೆಗಳು (Hospitals) ಪುನರ್ವಸತಿ ಕೇಂದ್ರಗಳು (Rehabilitation centers) ವೃದ್ಧಾಶ್ರಮಗಳು (Old age homes) ವಿಶೇಷ ಶಾಲೆಗಳು (Special schools) ಖಾಸಗಿ ಕ್ಲಿನಿಕ್‌ಗಳು Chettinad Academy of Research and Education

## 4,30,000 ಮೌಲ್ಯದ ಕಳೆದ 24 ಮೊಬೈಲ್‌ಗಳನ್ನು ಪತ್ತೆಹಚ್ಚಿದ ರಾಯಚೂರು ಪೊಲೀಸ್

ನೈಜ್ಯ ದೆಸೆ ನ್ಯೂಸ್



ಸದರ್ ಬಜಾರ್ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಕಳೆದುಹೋದ ಮೊಬೈಲ್ ಪ್ರಕರಣಗಳಿಗೆ ಸಂಬಂಧಿಸಿದಂತೆ ಪೊಲೀಸರು ಮಹತ್ವದ ಸಾಧನೆ ಮಾಡಿದ್ದು, ಒಟ್ಟು 4,30,000 ಮೌಲ್ಯದ 24 ಮೊಬೈಲ್‌ಗಳನ್ನು ಪತ್ತೆಹಚ್ಚಿ ಮಾಲೀಕರಿಗೆ ಹಿಂತಿ–ರುಗಿಸಿದ್ದಾರೆ.ಸಿ.ಇ.ಐ.ಆರ್ (ಸೆಂಟ್ರಲ್ ಎಕ್ವಿಪ್‌ಮೆಂಟ್ ಐಡೆಂಟಿಟಿ ರಿಜಿಸ್ಟರ್) ಪೋರ್ಟಲ್‌ನ ಸಹಾಯದಿಂದ ಕಳೆದುಹೋದ ಮೊಬೈಲ್‌ಗಳನ್ನು ಪತ್ತೆ ಹಚ್ಚಲಾಗಿದೆ.ಈ ಕಾರ್ಯಾಚರಣೆಮೂಲಕ ಕಳೆದುಹೋದ ಮೊಬೈಲ್‌ಗಳನ್ನು ಮರಳಿ ಪಡೆಯುವಲ್ಲಿ ಪೊಲೀಸರು ಯಶಸ್ವಿಯಾಗಿದ್ದಾರೆ.ಪತ್ತೆಂಯಾದ ಮೊಬೈಲ್‌ಗಳನ್ನು ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ ಮಾಲೀಕರಿಗೆ ಹಸ್ತಾಂತರಿಸಿದರು. ನಂತರ ಮಾತನಾಡಿದ ಅವರು,'ಅಧಿಕಾರಿಗಳು, ಸಾರ್ವಜನಿಕರು ತಮ್ಮ ಮೊಬೈಲ್ಕಳೆದುಹೋದ ಸಂದರ್ಭಗಳಲ್ಲಿ ತಕ್ಷಣ ಸಮೀಪದ ಪೊಲೀಸ್ ಠಾಣೆಗೆ ದೂರು ನೀಡಬೇಕು. ಹಾಗೂ ಸಿಇಐಆರ್ ಪೋರ್ಟಲ್‌ನಲ್ಲಿ ನೋಂದಣಿ ಮಾಡಿಸಬೇಕು' ಎಂದು ಹೇಳಿದರು.

## ಅಪೌಷ್ಠಿಕತೆ ಮುಕ್ತ ಅಭಿಯಾನಕ್ಕೆ ಜಿಲ್ಲಾಧಿಕಾರಿ ಡಾ. ಆನಂದ ಕೆ. ಚಾಲನೆ: ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ

ನೈಜ್ಯ ದೆಸೆ ನ್ಯೂಸ್

ವಿಜಯಪುರ: ಜಿಲ್ಲೆಯಲ್ಲಿ ಅಪೌಷ್ಠಿಕತೆಯಿಂದ ಬಳಲುತ್ತಿರುವ ಮಕ್ಕಳ ಸಂಖ್ಯೆಯನ್ನು ಶೂನ್ಯಕ್ಕೆ ತರುವ ನಿಟ್ಟಿನಲ್ಲಿ ಆರೋಗ್ಯ ಮತ್ತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸೇ–ರಿದಂತೆ ಎಲ್ಲಾ ಸಂಬಂಧಿತ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಡಾ. ಆನಂದ ಕೆ. ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು."ಜಿಲ್ಲೆಯಲ್ಲಿ ಅಪೌಷ್ಠಿಕತೆ ಹಾಗೂ ವಿವಿಧ ಆರೋಗ್ಯ ಸಮಸ್ಯೆಯಿಂದ ಬಳಲುತ್ತಿರುವ ಮಕ್ಕಳನ್ನು ಪತ್ತೆಹಚ್ಚಲು ಕೇವಲ ಕಚೇರಿ ದಾಖಲೆಗಳನ್ನು ನಂಬದೆ, ಅಧಿಕಾರಿಗಳು ಮತ್ತು ಸಿಬ್ಬಂದಿ ಮನೆ–ಮನೆಗೆ ಭೇಟಿ ನೀಡಿ ಪರಿಶೀಲನೆ ನಡೆಸಬೇಕು. ತೀವ್ರ ಅಪೌಷ್ಠಿಕತೆಯಿಂದ (SAM) ಬಳಲುತ್ತಿರುವ ಮಕ್ಕಳಿಗೆ ತಕ್ಷಣವೇ




ಪೌಷ್ಟಿಕ ಆಹಾರ ಮತ್ತು ಅಗತ್ಯ ವೈದ್ಯಕೀಯ ಸೌಲಭ್ಯ ಒದಗಿಸಿ, ಅವರ ಆರೋಗ್ಯ ಸುಧಾ–ರಿಸುವವರೆಗೆ ತೀವ್ರ ನಿಗಾ ವಹಿಸಬೇಕು," ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು. ಅಂಗನವಾಡಿ ಕೇಂದ್ರಗಳ ಕಾರ್ಯವೈಖ–ರಿಯ ಕುರಿತು ಮಾತನಾಡಿದ ಅವರು:ಮಕ್ಕಳಿಗೆ ವಿತರಿಸುವ ಆಹಾರ ಪದಾರ್ಥಗಳು ಗುಣಮಟ್ಟದಿಂದ ಕೂಡಿರಬೇಕು. ಇದರಲ್ಲಿ ಯಾವುದೇ ಲೋಪ ಕಂಡುಬಂದಲ್ಲಿ ಕಠಿಣ ಕ್ರಮ ಕೈಗೊಳ್ಳಲಾಗುವುದು, ವಿಶೇಷವಾಗಿ ಗ್ರಾಮೀಣ ಭಾಗದ ಅಂಗನವಾಡಿ ಕೇಂದ್ರಗಳ ಸುತ್ತಮುತ್ತಲಿನ ಪರಿಸರ ಸ್ವಚ್ಛವಾಗಿರಬೇಕು. ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು (CDPO) ಮತ್ತು ಮೇಲ್ವಿಚಾರಕರು ಈ ಬಗ್ಗೆ ಹೆಚ್ಚಿನ ಮುತುವರ್ಜಿ ವಹಿಸಬೇಕು, ಮಳೆಗಾಲ ಸಮೀಪಿಸುತ್ತಿರುವುದ–ರಿಂದ ಶಿಥಿಲಾವಸ್ಥೆಯಲ್ಲಿರುವ ಕಟ್ಟಡಗಳನ್ನು ಗುರುತಿಸಿ, ಕೂಡಲೇ ಮಕ್ಕಳನ್ನು ಸುರಕ್ಷಿತ ಕಟ್ಟಡಗಳಿಗೆ ಸ್ಥಳಾಂತರಿಸಲು ಕ್ರಮ ಕೈಗೊಳ್ಳಬೇಕು, ಬಾಲ್ಯವಿವಾಹ ಮತ್ತು ಭ್ರೂಣ ಲಿಂಗ ಪತ್ತೆಯಂತಹ ಪಿಡುಗುಗಳ ವಿರುದ್ಧ ಜಿಲ್ಲಾಧಿಕಾ–ರಿಗಳು ಕೆಂಡಾಮಂಡಲವಾದರು. "ಬಾಲ್ಯವಿವಾಹ ಕೇವಲ ಸಾಮಾಜಿಕ ಪಿಡುಗಲ್ಲ, ಅದು ಕ್ರಿಮಿನಲ್ ಅಪರಾಧ. ಎಲ್ಲಿಯಾದರೂ ಬಾಲ್ಯವಿವಾಹ ನಡೆಯುತ್ತಿರುವುದು ಕಂಡುಬಂದಲ್ಲಿ, ಅದಕ್ಕೆ ಕಾರಣರಾದ ಪೋಷಕರು ಮತ್ತು ಸಂಬಂಧಿಕರ ಮೇಲೆ ತಕ್ಷಣವೇ ಕ್ರಿಮಿನಲ್ ಪ್ರಕರಣ ದಾಖಲಿಸಿ," ಎಂದು ಎಚ್ಚರಿಕೆ ನೀಡಿದರು. ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಪ್ರತಿ ತಿಂಗಳು ತಪ್ಪದೇ ಕಾವಲು ಸಮಿತಿ ಸಭೆ ನಡೆಸಿ, ಪೋಕ್ಸೋ ಕಾಯ್ದೆ ಮತ್ತು ಮಕ್ಕಳ ಹಕ್ಕುಗಳ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಬೇಕು, ಅಪೌಷ್ಠಿಕತೆ ನಿವಾರಣಾ ಕೇಂದ್ರಗಳಲ್ಲಿ (ಓಖಅ) ದಾಖಲಾಗುವ ಮಕ್ಕಳ ಬಗ್ಗೆ ವಿಶೇಷ ಕಾಳಜಿ ವಹಿಸಿ, ಸಮಗ್ರ ದಾಖಲಾತಿ ನಿರ್ವಹಿಸಬೇಕು, ಮೂಲಭೂತ ಸೌಲಭ್ಯಗಳ ಕೊರತೆ ಇರುವ ಕೇಂದ್ರಗಳ ಪಟ್ಟಿ ಸಿದ್ಧಪಡಿಸಿ, ಅಭಿವೃದ್ಧಿ ಕಾಮಗಾ–ರಿಗಳಿಗೆ ಪ್ರಸ್ತಾವನೆ ಸಲ್ಲಿಸಬೇಕು.ಸಭೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು, ವಿವಿಧ ತಾಲೂಕುಗಳ ಸಿಡಿಪಿಒಗಳು ಹಾಗೂ ಆರೋಗ್ಯ ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

## "ಜೈ ಜವಾನ್, ಜೈ ಕಿಸಾನ್ ಮಾದರಿಯಲ್ಲಿ 'ಜೈ ಶಿಕ್ಷಕ' ಎನ್ನುವ ಗೌರವ ಸಮಾಜ ನೀಡಲಿ" : ಎಸ್ಪಿ ಲಕ್ಷ್ಮಣ ನಿಂಬರಗಿ ಕರೆ



ನೈಜ್ಯ ದೆಸೆ ನ್ಯೂಸ್

ವಿಜಯಪುರ: "ದೇಶದ ಗಡಿ ಕಾಯುವ ಸೈನಿಕ–ರಿಗೆ 'ಜೈ ಜವಾನ್' ಹಾಗೂ ದೇಶಕ್ಕೆ ಅನ್ನ ನೀಡುವ ರೈತರಿಗೆ 'ಜೈ ಕಿಸಾನ್' ಎಂದು ಗೌರವಿಸುವಂತೆ, ಉತ್ತಮ ಸಮಾಜ ಮತ್ತು ದೇಶವನ್ನು ಕಟ್ಟುವ ಶಿಕ್ಷಕರಿಗೆ 'ಜೈ ಶಿಕ್ಷಕ' ಎನ್ನುವ ಗೌರವ ಸಲ್ಲಬೇಕು" ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ ಅವರು ಮಾರ್ಮಿಕವಾಗಿ ನುಡಿದರು.ನಗರದ ಪ್ರತಿಷ್ಠಿತ ಬಿ.ಎಲ್.ಡಿ.ಇ. ಸಂಸ್ಥೆಯ ಜ್ಞಾನಯೋಗಿ ಶ್ರೀ ಸಿದ್ಧೇಶ್ವರ ಸ್ವಾಮೀಜಿ ಶಿಕ್ಷಣ ಮಹಾವಿದ್ಯಾಲಯದಲ್ಲಿ ಆಯೋಜಿಸಲಾಗಿದ್ದ ವಿದ್ಯಾರ್ಥಿ ಸಂಘದ ಉದ್ಘಾಟನಾ ಸಮಾರಂಭವನ್ನು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು. "ಮಕ್ಕಳ ಜೀವನದಲ್ಲಿ ಪೋಷಕರ ಪಾತ್ರದ ನಂತರ ಶಿಕ್ಷಕರ ಪ್ರಭಾವವೇ ಹೆಚ್ಚು. ವಿದ್ಯಾರ್ಥಿಗಳ ವ್ಯಕ್ತಿತ್ವ ರೂಪಿಸುವಲ್ಲಿ ಮತ್ತು ಅವರಲ್ಲಿನ ಸುಪ್ತ ಪ್ರತಿಭೆ ಗುರುತಿಸುವಲ್ಲಿ ಶಿಕ್ಷಕರ ಪಾತ್ರ ಅನನ್ಯ. ಹೀಗಾಗಿ, ಬಿ.ಎಡ್. ಕಲಿಯುತ್ತಿರುವ ಪ್ರಶಿಕ್ಷಣಾರ್ಥಿಗಳು ಕೇವಲ ಪದವಿಗಾಗಿ ಓದದೆ, ಮಕ್ಕಳ ಸರ್ವತೋಮುಖ ಅಭಿವೃದ್ಧಿಗಾಗಿ ಶ್ರಮಿಸುವ ಸಂಕಲ್ಪ ಮಾಡಬೇಕು" ಎಂದು ಅವರು ಸಲಹೆ ನೀಡಿದರು. ಇದೇ ವೇಳೆ ರಾಜ್ಯದ ಶೈಕ್ಷಣಿಕ ಪ್ರಗತಿಗೆ ಬಿ.ಎಲ್.ಡಿ.ಇ. ಸಂಸ್ಥೆ ನೀಡುತ್ತಿರುವ ಕೊಡುಗೆಯನ್ನು ಅವರು ಮುಕ್ತಕಂಠದಿಂದ ಶ್ಲಾಘಿಸಿದರು. ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಬಿ.ಎಲ್.ಡಿ.ಇ. ಸಂಸ್ಥೆಯ ಎಸ್. ಎಸ್. ಆವರಣದ ಆಡಳಿತಾಧಿಕಾರಿ ಐ.ಎಸ್. ಕಾಳಪ್ಪನವರ ಮಾತನಾಡಿ, "ಶಿಕ್ಷಕ ವೃತ್ತಿಯು ಹಣ ಗಳಿಸುವ ಮಾರ್ಗವಲ್ಲ, ಅದು ಸಮಾಜ ಸೇವೆ ಮಾಡುವ ಪವಿತ್ರ ಅವಕಾಶ. ಭಾವಿ ಶಿಕ್ಷಕರು ಶಿಸ್ತು, ಉತ್ತಮ ಆರೋಗ್ಯ ಮತ್ತು ನಿರಂತರ ಪ್ರಯತ್ನವನ್ನು ಮೈಗೂಡಿಸಿಕೊಂಡಾಗ ಮಾತ್ರ ಆದರ್ಶ ಶಿಕ್ಷಕರಾಗಲು ಸಾಧ್ಯ" ಎಂದರು. ಮತ್ತೋರ್ವ ಅತಿಥಿ ಪ್ರೊ. ವಿ.ಎಸ್. ಬಗಲಿ ಅವರು ಮಾತನಾಡಿ, ಈ ಮಹಾವಿದ್ಯಾಲಯವು ಗುಣಮಟ್ಟದ ಶಿಕ್ಷಕರನ್ನು ತಯಾರಿಸುವ ಕಮ್ಮಟವಿದ್ದಂತೆ. ಇಲ್ಲಿನ ವಿದ್ಯಾರ್ಥಿಗಳು ಕೌಶಲ್ಯಭರಿತ ತರಬೇತಿ ಪಡೆದು ಶಿಕ್ಷಣ ಕ್ಷೇತ್ರದಲ್ಲಿ ಕ್ರಾಂತಿ ಮಾಡಬೇಕು ಎಂದು ಆಶಿಸಿದರು.ಕಾಲೇಜಿನ ಪ್ರಾಚಾರ್ಯೆ ಡಾ. ಭಾರತಿ ವೈ. ಖಾಸನೀಸ ಅವರು ನೂತನವಾಗಿ ಆಯ್ಕೆಯಾದ ವಿದ್ಯಾರ್ಥಿ ಸಂಘದ ಪ್ರತಿನಿಧಿಗಳಿಗೆ ಪ್ರಮಾಣವಚನ ಬೋಧಿಸಿದರು. ವಿದ್ಯಾರ್ಥಿಗಳು ತಮ್ಮ ಶೈಕ್ಷಣಿಕ ಅವಧಿಯಲ್ಲಿ ಶಿಸ್ತುಬದ್ಧವಾಗಿ ಮತ್ತು ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸುವ ಭರವಸೆ ನೀಡಿದರು. ಕಾರ್ಯಕ್ರಮದಲ್ಲಿ ಸಹಪ್ರಾಧ್ಯಾಪಕರಾದ ಡಾ. ಎಂ.ಎಸ್. ಹಿರೇಮಠ, ಡಾ. ಜ್ಯೋತಿ ಪಟ್ಟಣಶೆಟ್ಟಿ, ಡಾ. ಬಿ.ಎಸ್. ಹಿರೇಮಠ, ಎಸ್.ಎಸ್. ಪಾಟೀಲ, ಡಾ. ಎಸ್.ಪಿ. ಶೇಗುಣಸಿ ಸೇರಿದಂತೆ ಎಂ.ಪಿ. ಕುಪ್ಪಿ, ಸುರೇಶ ಬಗಲಿ, ಸುಜಾತಾ ದೇಸಾಯಿ, ಎ.ಎಸ್. ಬರಡ್ಡಿ ಹಾಗೂ ವಿದ್ಯಾ ಭಮಗೊಂಡ ಸೇರಿದಂತೆ ಕಾಲೇಜಿನ ಸಿಬ್ಬಂದಿ ವರ್ಗ ಮತ್ತು ನೂರಾರು ಪ್ರಶಿಕ್ಷಣಾರ್ಥಿಗಳು ಉಪಸ್ಥಿತರಿದ್ದರು.

## ಪವಿತ್ರ ರಂಜಾನ್ ಹಬ್ಬದ ಅಂಗವಾಗಿ ಹಣ್ಣು ಹಂಪಲು ವಿತರಣೆ ಕಾರ್ಯಕ್ರಮ




ನೈಜ್ಯ ದೆಸೆ ನ್ಯೂಸ್

ಕವಿತಾಳ : ಮಾನ್ವಿ ವಿಧಾನಸಭಾ ಕ್ಷೇತ್ರದ ಕವಿತಾಳ ಪಟ್ಟಣದಲ್ಲಿ ಪವಿತ್ರ ರಂಜಾನ್ ಹಬ್ಬದ ಅಂಗವಾಗಿ ನಡೆದ ಈ ಹಣ್ಣು ಹಂಪಲು ವಿತರಣೆ ಕಾರ್ಯಕ್ರಮವು ಮಾನವೀಯ ಮೌಲ್ಯಗಳು ಮತ್ತು ಸಹಬಾಳ್ವೆಯ ಮಹತ್ವವನ್ನು ಮತ್ತೊಮ್ಮೆ ನೆನಪಿಸಿತು.ಕಾರ್ಯಕ್ರಮದ ಸಂದರ್ಭದಲ್ಲಿ ಸ್ಥಳೀಯ ಮುಖಂಡರು ಮಾತನಾಡಿ, ಇಂತಹ ಧಾರ್ಮಿಕ ಹಾಗೂ ಸಾಮಾಜಿಕ ಕಾರ್ಯಕ್ರಮಗಳು ಸಮಾಜದಲ್ಲಿ ಶಾಂತಿ, ಐಕ್ಯತೆ ಮತ್ತು ಪರಸ್ಪರ ಗೌರವವನ್ನು ಬೆಳೆಸಲು ಪ್ರಮುಖ ಪಾತ್ರವಹಿಸುತ್ತವೆ ಎಂದು ಅಭಿಪ್ರಾಯಪಟ್ಟರು. ವಿವಿಧ ಧರ್ಮಗಳ ಜನರು ಒಂದಾಗಿ ಸೇರಿ ಹಬ್ಬವನ್ನು ಆಚರಿಸುವುದು ನಮ್ಮ ದೇಶದ ವೈಶಿಷ್ಟ್ಯವಾಗಿದ್ದು, ಈ ಸಂಸ್ಕೃತಿಯನ್ನು ಮುಂದುವ–ರಿಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ಹೇಳಿದರು.ಶಿವರಾಜ್ ನಾಯಕ್ ಅವರ ನೇತೃತ್ವದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಬಡ ಮತ್ತು ಅಗತ್ಯವಿರುವ ಕುಟುಂಬಗಳಿಗೆ ಹಣ್ಣು ಹಂಪಲುಗಳನ್ನು ವಿತರಿಸಲಾಗಿದ್ದು, ಹಲವಾರು ಕುಟುಂಬಗಳು ಇದರ ಪ್ರಯೋಜನ ಪಡೆದುಕೊಂಡವು. ಈ ಮೂಲಕ ರಂಜಾನ್ ಹಬ್ಬದ ನಿಜವಾದ ಅರ್ಥವಾದ ದಾನಧರ್ಮ ಮತ್ತು ಸಹಾನುಭೂತಿ ಜೀವಂತವಾಗಿರುವುದನ್ನು ಕಾಣಬಹುದಾಯಿತು.ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಗಣ್ಯರು ಮತ್ತು ಯುವಕರು ಸಹ ಸಂಘಟಿತವಾಗಿ ಕಾರ್ಯನಿರ್ವಹಿಸಿ, ವಿತರಣೆಯನ್ನು ಸಮರ್ಪಕವಾಗಿ ನಡೆಸಿದರು. ಮಹಿಳೆಯರು ಮತ್ತು ಯುವಜನರು ಸಹ ಉತ್ಸಾಹದಿಂದ ಪಾಲ್ಗೊಂಡಿದ್ದು, ಕಾರ್ಯಕ್ರಮದ ಯಶಸ್ಸಿಗೆ ಕಾರಣರಾದರು.ಕೊನೆಯಲ್ಲಿ, ಹಬ್ಬದ ಅಂಗವಾಗಿ ಪರಸ್ಪರ ಶುಭಾಶಯಗಳನ್ನು ವಿನಿಮಯ ಮಾಡಿಕೊಂಡು, ಸಮಾಜದಲ್ಲಿ ಶಾಂತಿ ಮತ್ತು ಸೌಹಾರ್ದತೆಯ ವಾತಾವರಣ ಸದಾ ಇರಲಿ ಎಂದು ಪ್ರಾರ್ಥಿಸಲಾಯಿತು. ಈ ರೀತಿಯ ಕಾರ್ಯಗಳು ಸಮಾಜದಲ್ಲಿ ಒಗ್ಗಟ್ಟಿನ ಸಂದೇಶವನ್ನು ಬಲಪಡಿಸುವುದರ ಜೊತೆಗೆ, ಮುಂದಿನ ದಿನಗಳಲ್ಲಿ ಇನ್ನಷ್ಟು ಸೇವಾ ಕಾರ್ಯಗಳಿಗೆ ಪ್ರೇರಣೆಯಾಗುವಂತಿವೆ.

## ಜನಪದ ಸಾಹಿತ್ಯಕ್ಕೆ ಸಾವಿರಾರು ವರ್ಷಗಳ ಇತಿಹಾಸವಿದೆ: ಪ್ರೊ. ತಿಪ್ಪೇಸ್ವಾಮಿ ಡಿ.ಎಸ್. ಪ್ರತಿಪಾದನೆ

ನೈಜ್ಯ ದೆಸೆ ನ್ಯೂಸ್



ಬಾದಾಮಿ : "ಉತ್ತರ ಕರ್ನಾಟಕದ ಜನಪದ ಸಾಹಿತ್ಯವು ಅತ್ಯಂತ ಶ್ರೀಮಂತವಾಗಿದ್ದು, ಕೆರೂ–ರಿನ ಜಿ.ಎಸ್. ಗದ್ದಗಿಮಠ ಮತ್ತು ವಿಜಯಪುರ ಜಿಲ್ಲೆಯ ಹಲಸಂಗಿ ಗೆಳೆಯರು ಇದನ್ನು ಸಂಗ್ರಹಿಸಿ, ಸಂರಕ್ಷಿಸುವ ಮೂಲಕ ಜನಪದ ಲೋಕಕ್ಕೆ ಅಪಾರ ಕೊಡುಗೆ ನೀಡಿದ್ದಾರೆ" ಎಂದು ಹುನಗುಂದದ ವಿ.ಎಂ. ಕಾಲೇಜಿನ ಕನ್ನಡ ವಿಭಾಗದ ಪ್ರಾಧ್ಯಾಪಕರಾದ ಪ್ರೊ. ತಿಪ್ಪೇಸ್ವಾಮಿ ಡಿ.ಎಸ್. ಅವರು ಅಭಿಪ್ರಾಯಪಟ್ಟರು. ಸ್ಥಳೀಯ ಹೇಮರಡ್ಡಿ ಸಮುದಾಯ ಭವನದಲ್ಲಿ ಬುಧವಾರದಂದು ಆಯೋಜಿಸಲಾಗಿದ್ದ ಜಿಲ್ಲಾಮಟ್ಟದ ಪದವಿ ಕಾಲೇಜುಗಳ ವಿದ್ಯಾರ್ಥಿಗಳ ಜನಪದ ನೃತ್ಯ ಮತ್ತು ಜನಪದ ಗೀತಗಾಯನ ಸ್ಪರ್ಧೆಯಲ್ಲಿ ಅವರು ಮುಖ್ಯ ಅತಿಥಿಗಳಾಗಿ ಮಾತನಾಡುತ್ತಿದ್ದರು. ಈ ಕಾರ್ಯಕ್ರಮವನ್ನು ಕಾಲೇಜು ಶಿಕ್ಷಣ ಇಲಾಖೆ, ಬಾಗಲಕೋಟೆ ವಿಶ್ವವಿದ್ಯಾಲಯ ಜಮಖಂಡಿ ಮತ್ತು ಸರ್ಕಾರಿ ಪ್ರಥಮ ದರ್ಜೆ ಪದವಿ ಕಾಲೇಜು ಇವರ ಜಂಟಿ ಆಶ್ರಯದಲ್ಲಿ ಹಮ್ಮಿಕೊಳ್ಳಲಾಗಿತ್ತು."ಕರ್ನಾಟಕ ವಿಶ್ವವಿದ್ಯಾಲಯದ ಪ್ರಾಧ್ಯಾಪಕರಾಗಿದ್ದ ಜಿ.ಎಸ್. ಗದ್ದಗಿಮಠ ಅವರು ಹಳ್ಳಿ–ಹಳ್ಳಿಗಳಿಗೆ ಚಕ್ಕಡಿಯಲ್ಲಿ ಸಂಚರಿಸಿ ಜನಪದ ಸಾಹಿತ್ಯವನ್ನು ಸಂಗ್ರಹಿಸಿದ್ದರು. ಅವರು ನಡೆಸಿದ ಸಂಶೋಧನೆಯು ಕನ್ನಡದ ಮೊದಲ ಜಾನಪದ ಸಂಶೋಧನಾ ಗ್ರಂಥ–ವಾಗಿ ಇತಿಹಾಸ ನಿರ್ಮಿಸಿದೆ" ಎಂದು ತಿಪ್ಪೇಸ್ವಾಮಿ ನೆನಪಿಸಿಕೊಂಡರು, ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಬಿ.ಎಫ್. ಹೊರಕೇರಿ ಮಾತನಾಡಿ, "ಕನ್ನಡ ಭಾಷೆಗೆ ಎರಡು ಸಾವಿರ ವರ್ಷಗಳ ಲಿಖಿತ ಇತಿಹಾಸವಿದ್ದರೆ, ಜನಪದ ಸಾಹಿತ್ಯಕ್ಕೆ ಮಾನವ ಕುಲದ ಉಗಮದಷ್ಟೇ ಹಳೆಯ ಇತಿಹಾಸವಿದೆ. ಸಾವಿರಾರು ವರ್ಷಗಳ ಹಿಂದೆಯೇ ನಮ್ಮ ಜನಪದರು ತ್ರಿಪದಿ ರೂಪದಲ್ಲಿ ಸಾಹಿತ್ಯ ರಚಿಸಿರುವುದು ಹೆಮ್ಮೆಯ ವಿಷಯ" ಎಂದರು , ಕಾಲೇಜು ಸಮಿತಿ ಸದಸ್ಯ ಎಂ.ಐ. ಬಾರಾವಲಿ ಅವರು ಕಾರ್ಯಕ್ರಮಕ್ಕೆ ಚಾಲನೆ ನೀಡಿ, ವಿದ್ಯಾರ್ಥಿಗಳು ಗ್ರಾಮೀಣ ಸಾಹಿತ್ಯದ ಕಡೆಗೆ ಒಲವು ಬೆಳೆಸಿಕೊಂಡು ಸಂಶೋಧನೆಯಲ್ಲಿ ತೊಡಗಬೇಕು ಎಂದು ಆಶಿಸಿದರು. ಪ್ರಾಚಾರ್ಯ ಶಿವಾನಂದ ರಾಯನಗೌಡರ ಅವರು ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು. ಜಿಲ್ಲೆಯ ವಿವಿಧ ಕಾಲೇಜುಗಳಿಂದ ಆಗಮಿಸಿದ್ದ ನೂರಾರು ವಿದ್ಯಾರ್ಥಿಗಳು ಜನಪದ ಕಲೆಯ ಮೆರುಗನ್ನು ಪ್ರದರ್ಶಿಸಿದರು. ಸ್ಪರ್ಧೆಯ ವಿಜೇತರ ವಿವರ ಇಂತಿದೆ:ಜನಪದ ನೃತ್ಯ: ಸರ್ಕಾರಿ ಪ್ರಥ–ಮ ದರ್ಜೆ ಪದವಿ ಕಾಲೇಜು ಬಾದಾಮಿ (ಪ್ರಥ–ಮ) ಬಸವೇಶ್ವರ ಶಿಕ್ಷಣ ಮಹಾವಿದ್ಯಾಲಯ ಬಾಗಲಕೋಟೆ (ದ್ವಿತೀಯ) ಎಸ್.ಬಿ. ಮಮದಾಪೂರ ಪದವಿ ಕಾಲೇಜ್ ಬಾದಾಮಿ (ತೃತೀಯ). ಜನಪದ ಗೀತಗಾಯನ : ಎಸ್.ಬಿ. ಮಮದಾಪೂರ ಪದವಿ ಕಾಲೇಜು ಬಾದಾಮಿ (ಪ್ರಥಮ) ಬಸವೇಶ್ವರ ಶಿಕ್ಷಣ ಮಹಾವಿದ್ಯಾಲಯ ಬಾಗಲಕೋಟೆ (ದ್ವಿತೀಯ) ಸರ್ಕಾರಿ ಪ್ರಥಮ ದರ್ಜೆ ಪದವಿ ಕಾಲೇಜು ಬಾದಾಮಿ (ತೃತೀಯ) ಪ್ರಶಸ್ತಿ ಪಡೆದರು.ನಿರ್ಣಾಯಕರಾಗಿ ನಾಗರಾಜ ಹೊಟ್ಟಿ, ಪವಿತ್ರಾ ಜಕ್ಕಪ್ಪನವರ ಹಾಗೂ ಶಂಕರ ನಾಯಕ ಕಾರ್ಯನಿರ್ವಹಿಸಿದರು. ಕಾರ್ಯಕ್ರಮದಲ್ಲಿ ಆರ್. ಎಸ್. ಪೂಜಾರ, ಹನುಮಂತ ಅಪ್ಪಣ್ಣವರ, ಎಂ.ಎಸ್. ಸಿದ್ದಲಿಂಗಪ್ಪನವರ, ಗೋವರ್ಧನ ಪಿ.ಟಿ. ಉಪಸ್ಥಿತ–ರಿದ್ದರು. ಕಾಂಚನಮಾಲಾ ಪಾಟೀಲ ಸ್ವಾಗತಿಸಿದರು, ಚಂದ್ರಶೇಖರ್ ಹೆಗಡೆ ಪ್ರಾಸ್ತಾವಿಕವಾಗಿ ಮಾತನಾಡಿದರು ಮತ್ತು ಬಾಬುರಾಯಣ್ಣ ಧನ್ನೂರ ವಂದಿಸಿದರು.ಇಂದಿನ ಆಧುನಿಕ ಯುಗದಲ್ಲಿ ಜನಪದ ಕಲೆಗಳು ನಶಿಸುತ್ತಿರುವ ಕಾಲದಲ್ಲಿ, ಇಂತಹ ಸ್ಪರ್ಧೆಗಳು ಗ್ರಾಮೀಣ ಸೊಗಡನ್ನು ಉಳಿಸಲು ಪೂರಕವಾಗಿವೆ. ಬಾಗಲಕೋಟೆ ಜಿಲ್ಲೆಯು ಜಾನಪದ ಕಲೆಗಳ ತವರೂರಾಗಿದ್ದು, ಇಂತಹ ವೇದಿಕೆಗಳು ವಿದ್ಯಾರ್ಥಿಗಳಲ್ಲಿ ಸಾಂಸ್ಕೃತಿಕ ಪ್ರಜ್ಞೆಯನ್ನು ಜಾಗೃತಗೊಳಿಸುತ್ತವೆ ಎಂಬುದು ಸಂಘಟಕರ ಆಶಯವಾಗಿತ್ತು.